









ಸಂಪುಟ: 04 Vol: | ಸಂಚಿಕೆ: 110 Issue: | ರಾಯಚೂರು Raichur | 12-10-2026 | ಸೋಮವಾರ Monday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


# ರಷ್ಯಾಉಕ್ರೇನ್ ನಡುವೆ ಇಂಧನ ಕದನ ವಿರಾಮಕ್ಕೆ ಒಪ್ಪಿಗೆ: ಡೊನಾಲ್ಡ್ ಟ್ರಂಪ್ ಘೋಷಣೆ

ವಾಷಿಂಗ್ಟನ್: ರಷ್ಯಾ ಮತ್ತು ಉಕ್ರೇನ್ ಪರಸ್ಪರರ ಇಂಧನ ಮೂಲಸೌಕರ್ಯಗಳ ಮೇಲೆ ನಡೆಸುತ್ತಿರುವ ದಾಳಿಗಳನ್ನು ತಕ್ಷಣದಿಂದಲೇ ನಿಲ್ಲಿಸಲು ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.

ತಮ್ಮ ಟ್ರೂತ್ ಸೋಶಿಯಲ್ ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಟ್ರಂಪ್, ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧದಲ್ಲಿ ಇಂಧನ ಮೂಲಸೌಕರ್ಯಗಳ ಮೇಲಿನ ದಾಳಿಗಳಿಗೆ ಸಂಬಂಧಿಸಿದಂತೆ ಕದನ ವಿರಾಮ ಜಾರಿಗೆ ಬಂದಿದೆ. ಎರಡೂ ದೇಶಗಳು ಇದಕ್ಕೆ ಒಪ್ಪಿಗೆ ಸೂಚಿಸಿದ್ದು, ಒಪ್ಪಂದವನ್ನು ಯಾವುದೇ ಕಾರಣಕ್ಕೂ ಉಲ್ಲಂಘಿಸಬಾರದು ಎಂದು ತಿಳಿಸಿದ್ದಾರೆ.

ರಷ್ಯಾದ ಡೀಸೆಲ್ ಸಂಸ್ಕರಣಾಗಾರದ ಮೇಲೆ ಉಕ್ರೇನ್ ನಡೆಸಿದ ದಾಳಿಯಿಂದ ಜಾಗತಿಕ ಇಂಧನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ವಿರುದ್ಧ ಟ್ರಂಪ್ ಆರೋಪ ಮಾಡಿದ ಮರುದಿನವೇ ಈ ಘೋಷಣೆ ಹೊರಬಿದ್ದಿದೆ.

ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧದ ಅವಧಿಯಲ್ಲಿ ಎರಡೂ ದೇಶಗಳು ಪರಸ್ಪರರ ತೈಲ ಸಂಸ್ಕರಣಾಗಾರಗಳು, ಇಂಧನ ಸಂಗ್ರಹಣಾ ಕೇಂದ್ರಗಳು ಹಾಗೂ ಇತರ ಇಂಧನ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುತ್ತಿವೆ. ಇಂತಹ ದಾಳಿಗಳಿಂದ ಇಂಧನ ಪೂರೈಕೆ ವ್ಯವಸ್ಥೆಗೆ ಹಾನಿಯಾಗುವುದರ ಜೊತೆಗೆ ಜಾಗತಿಕ ಮಾರುಕಟ್ಟೆಯ ಮೇಲೂ ಪರಿಣಾಮ ಬೀರುತ್ತಿದೆ.



ಇಂಧನ ಮೂಲಸೌಕರ್ಯಗಳ ಮೇಲಿನ ದಾಳಿಗಳನ್ನು ನಿಲ್ಲಿಸುವ ಒಪ್ಪಂದವು ತಕ್ಷಣದಿಂದಲೇ ಜಾರಿಗೆ ಬರಲಿದೆ ಎಂದು ಟ್ರಂಪ್ ಹೇಳಿದ್ದರೂ, ಒಪ್ಪಂದದ ಷರತ್ತುಗಳು ಹಾಗೂ ಅನುಷ್ಠಾನದ ಕುರಿತು ಶ್ವೇತಭವನದಿಂದ ಯಾವುದೇ ಹೆಚ್ಚುವರಿ ಮಾಹಿತಿ ಹೊರಬಿದ್ದಿಲ್ಲ. ರಷ್ಯಾ ಮತ್ತು ಉಕ್ರೇನ್ ಸರ್ಕಾರಗಳಿಂದಲೂ ಒಪ್ಪಂದದ ಕುರಿತು ಅಧಿಕೃತ ದೃಢೀಕರಣದ ವಿವರಗಳು ಲಭ್ಯವಾಗಿಲ್ಲ.

ಇದಕ್ಕೂ ಮೊದಲು ಉಕ್ರೇನ್‌ನಲ್ಲಿ ಹೊಸ ಅಧ್ಯಕ್ಷರನ್ನು ಆಯ್ಕೆ ಮಾಡುವ ಸಮಯ ಬಂದಿದೆ ಎಂದು ಟ್ರಂಪ್ ಹೇಳಿದ್ದರು. ರಷ್ಯಾದೊಂದಿಗಿನ

2ನೇ ಪುಟಕ್ಕೆ

# ಡಿ.ಕೆ. ಶಿವಕುಮಾರ್ ವಿರುದ್ಧ ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ

ಬೆಂಗಳೂರು: ಸ್ಟಿಂಗ್ ಆಪರೇಷನ್ ಆರೋಪಕ್ಕೆ ಸಂಬಂಧಿಸಿದಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ ನಡೆಸಿದ್ದು, ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಶಿವಕುಮಾರ್ ಭೇಟಿಯಾದ ವ್ಯಕ್ತಿ ಯಾರು ಎಂಬುದನ್ನು ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಸಂತನಗರದ ಶಾಂಗ್ರೀಲಾ ಖಾಸಗಿ ಹೋಟೆಲ್‌ನಲ್ಲಿ ಡಿ.ಕೆ. ಶಿವಕುಮಾರ್ ವ್ಯಕ್ತಿಯೊಬ್ಬರನ್ನು ಭೇಟಿಯಾಗಿದ್ದರು. ಆ ವ್ಯಕ್ತಿಗೂ ಸ್ಟಿಂಗ್ ಆಪರೇಷನ್‌ಗೂ ಸಂಬಂಧವಿದೆಯೇ? ಆತನೇ ಸ್ಟಿಂಗ್ ಆಪರೇಷನ್ ವರದಿಯನ್ನು ನೀಡಿದ್ದಾನೆಯೇ? ಎಂಬ ಪ್ರಶ್ನೆಗಳಿಗೆ ಶಿವಕುಮಾರ್ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

ಖಾಸಗಿ ಹೋಟೆಲ್‌ನಲ್ಲಿ ಆ ವ್ಯಕ್ತಿಯನ್ನು ಭೇಟಿಯಾದ ಬಳಿಕ ಶಿವಕುಮಾರ್ ಸಚಿವ



ಸಂಪುಟ ಸಭೆಗೆ ಸ್ಟಿಂಗ್ ಆಪರೇಷನ್‌ಗೆ ಸಂಬಂಧಿಸಿದ ಪಟ್ಟಿಯನ್ನು ತೆಗೆದುಕೊಂಡು ಹೋಗಿದ್ದರು. ಉತ್ತರ ಭಾರತದಿಂದ ನಿರ್ದೇಶನಗಳು ಬರುತ್ತಿವೆ ಹಾಗೂ ಕುಮಾರಸ್ವಾಮಿ ಅವರೇ ಸ್ಟಿಂಗ್ ಆಪರೇಷನ್ ಮಾಡಿಸುತ್ತಿದ್ದಾರೆ ಎಂದು ಆರೋಪಿಸಿದ್ದರು. ಆದರೆ ಸ್ಟಿಂಗ್ ಆಪರೇಷನ್‌ನ ಮಹಾನಾಯಕರು ಯಾರು ಎಂಬುದು ರಾಜ್ಯದ ಜನತೆಗೆ ತಿಳಿದಿದೆ ಎಂದು ಕುಮಾರಸ್ವಾಮಿ ವ್ಯಂಗ್ಯವಾಡಿದರು.

ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಕುರಿತು ಸಾರ್ವಜನಿಕರಿಗೆ ಸತ್ಯಾಂಶ ತಿಳಿಸುವ ಜವಾಬ್ದಾರಿ ಶಿವಕುಮಾರ್

2ನೇ ಪುಟಕ್ಕೆ

# ಗ್ರಾಮೀಣ ಕ್ಷೇತ್ರದಲ್ಲಿ ಕಾಂಗ್ರೆಸ್ ಬಿಎಲ್‌ಎ ಸದಸ್ಯರ ಸಭೆ: ಪಕ್ಷ ಸಂಘಟನೆಗೆ ಶಾಸಕ ಬಸನಗೌಡ ದದ್ದಲ್ ಕರೆ



ರಾಯಚೂರು, ಅ.11: ಮುಂಬರುವ ವಿವಿಧ ಚುನಾವಣೆಗಳ ಹಿನ್ನೆಲೆಯಲ್ಲಿ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಬೂತ್ ಮಟ್ಟದ ಏಜೆಂಟರ (ಬಿಎಲ್‌ಎ) ಸಭೆಯನ್ನು ಭಾನುವಾರ ಶಾಸಕ ಬಸನಗೌಡ ದದ್ದಲ್ ನೇತೃತ್ವದಲ್ಲಿ ನಡೆಸಲಾಯಿತು. ಸಭೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ, ಚುನಾವಣಾ ಸಿದ್ಧತೆ ಹಾಗೂ ಪಕ್ಷದ ಸಂಘಟನೆಯನ್ನು ಬಲಪಡಿಸುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಶಾಸಕ ಬಸನಗೌಡ ದದ್ದಲ್, ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಸಂದರ್ಭದಲ್ಲಿ ಅರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಬಿಎಲ್‌ಎ ಸದಸ್ಯರು ಎಚ್ಚರಿಕೆ ವಹಿಸಬೇಕು. ಮತದಾರರ ಹಕ್ಕುಗಳ ರಕ್ಷಣೆಗೆ ಆದ್ಯತೆ ನೀಡುವುದರ ಜೊತೆಗೆ ಮತದಾರರ ಪಟ್ಟಿ ಪರಿಶೀಲನೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.

ಮುಂಬರುವ ಶಿಕ್ಷಕರ ಹಾಗೂ ಪದವೀಧರರ ವಿಧಾನ ಪರಿಷತ್ ಚುನಾವಣೆಗಳ ಸಿದ್ಧತೆಗಳ ಕುರಿತು ಚರ್ಚಿಸಿದ ಅವರು, ಚುನಾವಣಾ ಕಾರ್ಯಚಟುವಟಿಕೆಗಳನ್ನು ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಸಮನ್ವಯದಿಂದ ನಿರ್ವಹಿಸಬೇಕು ಎಂದರು.

ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳ ಹಿನ್ನೆಲೆಯಲ್ಲಿ ಕ್ಷೇತ್ರದ ಪ್ರತಿಯೊಂದು ಗ್ರಾಮ, ವಾರ್ಡ್ ಮತ್ತು ಬೂತ್ ಮಟ್ಟದಲ್ಲಿ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು. ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಜನರ ಸಮಸ್ಯೆಗಳನ್ನು ಆಲಿಸಿ, ಜನಸಂಪರ್ಕವನ್ನು ವಿಸ್ತರಿಸುವ ಮೂಲಕ ಪಕ್ಷದ ಸಂಘಟನೆಯನ್ನು ಸಕ್ರಿಯಗೊಳಿಸಬೇಕು ಎಂದು ಕರೆ ನೀಡಿದರು.

ಚುನಾವಣಾ ಸಿದ್ಧತೆಗಳನ್ನು ಈಗಿನಿಂದಲೇ ವ್ಯವಸ್ಥಿತವಾಗಿ ಕೈಗೊಂಡು ಕಾರ್ಯಕರ್ತರಿಗೆ ಜವಾಬ್ದಾರಿಗಳನ್ನು ಹಂಚಿಕೆ ಮಾಡಬೇಕು. ಪಕ್ಷದ ಪ್ರತಿಯೊಬ್ಬ ಪದಾಧಿಕಾರಿ ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪಕ್ಷದ ಹಿರಿಯ ಮುಖಂಡರು, ಪದಾಧಿಕಾರಿಗಳು, ಬಿಎಲ್‌ಎ ಸದಸ್ಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಂತ್ರಾಲಯದಲ್ಲಿ ಶರನ್ನವರಾತ್ರಿ ಉತ್ಸವಕ್ಕೆ ಚಾಲನೆ: ಸುಬುಧೇಂದ್ರ ತೀರ್ಥರಿಂದ ಘಟಸ್ಥಾಪನೆ

ಮಂತ್ರಾಲಯ: ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ಭಾನುವಾರ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಸಾಂಪ್ರದಾಯಿಕ ವಿಧಿವಿಧಾನಗಳೊಂದಿಗೆ ಘಟಸ್ಥಾಪನೆ ನೆರವೇರಿಸುವ ಮೂಲಕ ನವರಾತ್ರಿ ಉತ್ಸವಕ್ಕೆ ಚಾಲನೆ ನೀಡಿದರು.

ಶರನ್ನವರಾತ್ರಿಯ ಪವಿತ್ರ ಸಂದರ್ಭದಲ್ಲಿ ಶ್ರೀಮಠದಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಶ್ರೀ ಸುಬುಧೇಂದ್ರ ತೀರ್ಥರು ಜಗನ್ಮಾತೆ ದುರ್ಗಾದೇವಿಯನ್ನು ಆರಾಧಿಸಿ ಲೋಕಕಲ್ಯಾಣ, ಸುಖಶಾಂತಿ ಹಾಗೂ ಸಮಸ್ತ ಭಕ್ತರ ಸಮೃದ್ಧಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ನವರಾತ್ರಿ ಮಹೋತ್ಸವದ ಪ್ರಯುಕ್ತ ಶ್ರೀಮಠದ ಶ್ರೀ ಗುರುಸಾರ್ವಭೌಮ ವಿದ್ಯಾಪೀಠದ ಪಂಡಿತರು ಹಾಗೂ ವಿದ್ಯಾರ್ಥಿಗಳಿಂದ ಪ್ರವಚನ, ಜ್ಞಾನಕಾರ್ಯ ಮತ್ತು ವೇದಪಾರಾಯಣ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು



ನಡೆಯಲಿವೆ. ನವರಾತ್ರಿಯ ದಿನಗಳಲ್ಲಿ ವೇದಘೋಷ, ಮಂತ್ರಪಠಣ ಹಾಗೂ ದೇವಿಯ ಆರಾಧನೆಯೊಂದಿಗೆ ಶ್ರೀಮಠದಲ್ಲಿ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗಲಿದೆ.

ಇದೇ ಸಂದರ್ಭದಲ್ಲಿ ಮಂತ್ರಾಲಯದ ಗ್ರಾಮದೇವತೆ ಶ್ರೀ ಮಂಚಾಲಮ್ಮ ದೇವಿಯ ಸನ್ನಿಧಿಯನ್ನು ವೀಳ್ಯದೆಲೆಗಳಿಂದ ವಿಶೇಷವಾಗಿ ಅಲಂಕರಿಸಲಾಗಿತ್ತು. ಸಾಂಪ್ರದಾಯಿಕ ಶೈಲಿಯಲ್ಲಿ ಕಂಗೊಳಿಸಿದ ದೇವಿಯ ಸನ್ನಿಧಿಯು ನವರಾತ್ರಿ ಸಂಭ್ರಮಕ್ಕೆ ಮತ್ತಷ್ಟು ಮೆರುಗು ನೀಡಿತು.

ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ಶ್ರೀಮಠದಲ್ಲಿ ಧಾರ್ಮಿಕ ಆಚರಣೆಗಳು ಮುಂದುವರಿಯಲಿದ್ದು, ಭಕ್ತರು ದೇವಿಯ ಅನುಗ್ರಹ ಹಾಗೂ ಶ್ರೀ ರಾಘವೇಂದ್ರ ಸ್ವಾಮಿಗಳ ಆಶೀರ್ವಾದ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

# ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ: ಅ.18ರಂದು ಪತ್ರಕರ್ತರಿಗೆ ಜಿಲ್ಲಾ ಮಟ್ಟದ ಗಾಯನ ಸ್ಪರ್ಧೆ

ರಾಯಚೂರು: ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಅಕ್ಟೋಬರ್ 18ರಂದು ಬೆಳಿಗ್ಗೆ 10 ಗಂಟೆಗೆ ನಗರದ ಪತ್ರಿಕಾ ಭವನದಲ್ಲಿ ಜಿಲ್ಲೆಯ ಪತ್ರಕರ್ತರಿಗಾಗಿ ಗಾಯನ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಸ್ಪರ್ಧೆಯಲ್ಲಿ ಕನ್ನಡ ಚಲನಚಿತ್ರ ಗೀತೆಗಳು, ಭಾವಗೀತೆಗಳು, ಹಿಂದಿ ಹಾಗೂ ತೆಲುಗು ಚಲನಚಿತ್ರ ಗೀತೆಗಳನ್ನು ಹಾಡಲು ಅವಕಾಶ ಕಲ್ಪಿಸಲಾಗಿದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತಿಯಿರುವ ಪತ್ರಕರ್ತರು ಅಕ್ಟೋಬರ್ 15ರೊಳಗೆ ತಮ್ಮ ಹೆಸರು ನೋಂದಾಯಿಸಿಕೊಳ್ಳಬೇಕು.

ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆಯುವ ವಿಜೇತರಿಗೆ ಆಕರ್ಷಕ ಟ್ರೋಫಿ ಮತ್ತು ಪ್ರಮಾಣಪತ್ರ ನೀಡಿ ಗೌರವಿಸಲಾಗುವುದು.

ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಗಿಲ್ಡ್ ಬೆಳ್ಳಿ ಮಹೋತ್ಸವ ಸಾಂಸ್ಕೃತಿಕ ಸಮಿತಿಯ ಚಂದ್ರಕಾಂತ ಮಸಾನಿ (99726 69369), ಖಾನಸಾಬ್ ಮೋಮಿನ್ (7022265311), ಸತ್ಯನಾರಾಯಣ (99868 59891) ಹಾಗೂ ಚನ್ನಬಸವ (99452 08017) ಅವರನ್ನು ಸಂಪರ್ಕಿಸಬಹುದು.

ಜಿಲ್ಲೆಯ ಪತ್ರಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗಾಯನ ಸ್ಪರ್ಧೆಯನ್ನು ಯಶಸ್ವಿಗೊಳಿಸಬೇಕು ಎಂದು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ವೆಂಕಟೇಶ್ ಗಲಗ ವರ್ಗಾವಣೆ ಹಿಂಪಡೆಯದಿದ್ದರೆ ಜಿಲ್ಲೆ ಬಂದ್: ಶಿವಗನಿ ನಾಯಕ ಜಿಂಕಲ್

ರಾಯಚೂರು: ಲೋಕೋಪಯೋಗಿ ಇಲಾಖೆಯ ರಾಯಚೂರು ವಿಭಾಗದ ಕಾರ್ಯಪಾಲಕ ಅಭಿಯಂತರ ವೆಂಕಟೇಶ್ ಗಲಗ ಅವರನ್ನು ಆಡಳಿತಾತ್ಮಕ ಕಾರಣದ ನೆಪದಲ್ಲಿ ಅನಗತ್ಯವಾಗಿ ವರ್ಗಾವಣೆ ಮಾಡಲಾಗಿದ್ದು, ಸರ್ಕಾರ ಕೂಡಲೇ ವರ್ಗಾವಣೆ ಆದೇಶವನ್ನು ಹಿಂಪಡೆದು ಅವರನ್ನು ಪ್ರಸ್ತುತ ಹುದ್ದೆಯಲ್ಲಿಯೇ ಮುಂದುವರಿಸಬೇಕು. ಇಲ್ಲದಿದ್ದರೆ ಜಿಲ್ಲೆಯ ವಾಲ್ಮೀಕಿ ನಾಯಕ ಸಮಾಜದ ವಿವಿಧ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ರಾಯಚೂರು ಜಿಲ್ಲೆ ಬಂದ್‌ಗೆ ಕರೆ ನೀಡಲಾಗುವುದು ಎಂದು ಮಹರ್ಷಿ ವಾಲ್ಮೀಕಿ ನಾಯಕರ ಮಹಾವೇದಿಕೆ (ರಿ.) ಬೆಂಗಳೂರು ಸಂಘಟನೆಯ ಕಾರ್ಯದರ್ಶಿ ಶಿವಗನಿ ನಾಯಕ ಜಿಂಕಲ್ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ವಾಲ್ಮೀಕಿ ನಾಯಕ ಸಮಾಜಕ್ಕೆ ಸೇರಿದ ಸರ್ಕಾರಿ ನೌಕರರನ್ನು



ವಿವಿಧ ರೀತಿಯಲ್ಲಿ ಗುರಿಯಾಗಿಸಲಾಗುತ್ತಿದೆ ಎಂದು ಆರೋಪಿಸಿದರು. ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳನ್ನು ಅನಗತ್ಯವಾಗಿ ವರ್ಗಾವಣೆ ಮಾಡುವ ಪ್ರವೃತ್ತಿ ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವೆಂಕಟೇಶ್ ಗಲಗ ಅವರ ಕಾರ್ಯದಕ್ಷತೆ, ಸೇವಾನಿಷ್ಠೆ ಹಾಗೂ ಆಡಳಿತಾತ್ಮಕ ಅನುಭವವನ್ನು ಪರಿಗಣಿಸಿ 2025ರ ಮೇ 31ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಲೋಕೋಪಯೋಗಿ ಇಲಾಖೆಯ ರಾಯಚೂರು ವಿಭಾಗಕ್ಕೆ ವರ್ಗಾಯಿಸಲಾಗಿತ್ತು. ಆದರೆ ಕೇವಲ 13 ತಿಂಗಳ ಅವಧಿಯಲ್ಲಿಯೇ ಅಕ್ಟೋಬರ್ 6ರಂದು ಆಡಳಿತಾತ್ಮಕ ಹಿತದೃಷ್ಟಿಯ ಕಾರಣ ನೀಡಿ ಮತ್ತೊಮ್ಮೆ ವರ್ಗಾವಣೆ ಮಾಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಹೇಳಿದರು.

ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಯನ್ನು ಅಲ್ಪಾವಧಿಯಲ್ಲಿಯೇ ವರ್ಗಾವಣೆ ಮಾಡುವ ಅಗತ್ಯವೇನಿತ್ತು ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರು ಈ ವಿಷಯದಲ್ಲಿ ಮಧ್ಯಪ್ರವೇಶಿಸಿ

2ನೇ ಪುಟಕ್ಕೆ

# ಅಂಬೇಡ್ಕರ್ ಪ್ರೀಮಿಯರ್ ಲೀಗ್2026 ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ

ಜಾಲಹಳ್ಳಿ: ಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಪ್ರೀಮಿಯರ್ ಲೀಗ್2026 ಕ್ರಿಕೆಟ್ ಪಂದ್ಯಾವಳಿಗೆ ಭಾನುವಾರ ಗಣ್ಯರ ಸಮ್ಮುಖದಲ್ಲಿ ಚಾಲನೆ ನೀಡಲಾಯಿತು. ಯುವಕರಲ್ಲಿ ಕ್ರೀಡಾಸಕ್ತಿ ಬೆಳೆಸುವ ಹಾಗೂ ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ.



ಪಂದ್ಯಾವಳಿಯಲ್ಲಿ ವಿಜೇತ ತಂಡಗಳಿಗೆ ಪ್ರಥಮ ಬಹುಮಾನವಾಗಿ ₹15 ಸಾವಿರ, ದ್ವಿತೀಯ ಬಹುಮಾನವಾಗಿ ₹10 ಸಾವಿರ ಹಾಗೂ ತೃತೀಯ ಬಹುಮಾನವಾಗಿ ₹5 ಸಾವಿರ ನಗದು ಬಹುಮಾನ ಘೋಷಿಸಲಾಗಿದೆ. ಪ್ರಥಮ ಬಹುಮಾನವನ್ನು ಶ್ರೀದೇವಿ ಆರ್. ನಾಯಕ್, ದ್ವಿತೀಯ ಬಹುಮಾನವನ್ನು ಭೂತಪ್ಪ ದೇವರಮನಿ ಹಾಗೂ ತೃತೀಯ ಬಹುಮಾನವನ್ನು ರಮೇಶ್ ಬಾವಿಮನಿ ಪ್ರಾಯೋಜಿಸಿದ್ದಾರೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಥಮ ಬಹುಮಾನ ಪ್ರಾಯೋಜಕರೂ ಆಗಿರುವ ರಾಷ್ಟ್ರೀಯ ಮಹಿಳಾ ಕಾರ್ಯದರ್ಶಿ ಶ್ರೀದೇವಿ ಆರ್. ನಾಯಕ್, ಯುವಜನರು ಶಿಕ್ಷಣದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಭಾಗವಹಿಸಬೇಕು. ಕ್ರೀಡೆಯಿಂದ ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯ ವೃದ್ಧಿಯಾಗುವುದರ ಜೊತೆಗೆ ಶಿಸ್ತು, ಆತ್ಮವಿಶ್ವಾಸ, ನಾಯಕತ್ವ ಮತ್ತು ಒಗ್ಗಟ್ಟಿನ ಮನೋಭಾವ ಬೆಳೆಯುತ್ತದೆ. ಗ್ರಾಮೀಣ ಭಾಗದ ಯುವಕರು ತಮ್ಮಲ್ಲಿರುವ ಕ್ರೀಡಾ ಪ್ರತಿಭೆಯನ್ನು ಗುರುತಿಸಿಕೊಂಡು ಉನ್ನತ ಮಟ್ಟದಲ್ಲಿ ಸಾಧನೆ ಮಾಡುವತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಭೂತಪ್ಪ ದೇವರಮನಿ ಮಾತನಾಡಿ, ಇಂತಹ ಕ್ರೀಡಾಕೂಟಗಳು ಯುವಕರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವುದರ ಜೊತೆಗೆ ಪರಸ್ಪರ ಸ್ನೇಹ ಮತ್ತು ಸೌಹಾರ್ದತೆಯನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ತಿಳಿಸಿ ಪಂದ್ಯಾವಳಿಗೆ ಶುಭ ಹಾರೈಸಿದರು.

ಭೀಮಣ್ಣ ವೀರಗೋಟ ಮಾತನಾಡಿ, ಯುವಕರು ಮೊಬೈಲ್ ಬಳಕೆಯಲ್ಲಿ ಹೆಚ್ಚಿನ ಸಮಯ ಕಳೆಯದೆ ಕ್ರೀಡೆ ಹಾಗೂ ಇತರ ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಹಾಗೂ ಶಿಸ್ತಿನ ಜೀವನ ರೂಪಿಸಿಕೊಳ್ಳಬೇಕು.

2ನೇ ಪುಟಕ್ಕೆ

# ₹30 ಕೋಟಿ ವೆಚ್ಚದ ತಾಯಿ-ಮಕ್ಕಳ ಆಸ್ಪತ್ರೆ ಕಟ್ಟಡಕ್ಕೆ ಕಿಡಿಗೇಡಿಗಳಿಂದ ಹಾನಿ

ಲಿಂಗಸುಗೂರು: ಪಟ್ಟಣದ ಪುರಸಭೆ ವ್ಯಾಪ್ತಿಯ ಕರಡಕಲ್ ಹೊರವಲಯದಲ್ಲಿ ಸುಮಾರು ₹30 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡಕ್ಕೆ ಸೂಕ್ತ ಭದ್ರತೆ ಇಲ್ಲದ ಕಾರಣ ಕಿಡಿಗೇಡಿಗಳು ನುಗ್ಗಿ ಹಾನಿಗೊಳಿಸಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಆಸ್ಪತ್ರೆ ನಿರ್ಮಾಣಗೊಂಡು ಸುಮಾರು ಒಂದು ವರ್ಷ ಕಳೆದರೂ ಉದ್ಘಾಟನೆಯಾಗದೆ ಇರುವುದರಿಂದ ಕಟ್ಟಡದ ಸುರಕ್ಷತೆ ನಿರ್ಲಕ್ಷ್ಯಕ್ಕೊಳಗಾಗಿದೆ. ಆಸ್ಪತ್ರೆ ಆವರಣದಲ್ಲಿ ಭದ್ರತಾ ಸಿಬ್ಬಂದಿ ಅಥವಾ ಕಾವಲುಗಾರರನ್ನು ನಿಯೋಜಿಸದಿರುವುದೇ ಇಂತಹ ಘಟನೆಗಳಿಗೆ ಕಾರಣವಾಗಿದೆ ಎಂದು ಸ್ಥಳೀಯ ಸಾರ್ವಜನಿಕರು ಆರೋಪಿಸಿದ್ದಾರೆ.

ಕೆಲವು ದಿನಗಳ ಹಿಂದೆ ರಾತ್ರಿ ವೇಳೆ ಆಸ್ಪತ್ರೆ ಆವರಣಕ್ಕೆ ನುಗ್ಗಿದ ಕಿಡಿಗೇಡಿಗಳು ಕಟ್ಟಡಕ್ಕೆ ಅಳವಡಿಸಿದ್ದ ಹವಾನಿಯಂತ್ರಣ ಯಂತ್ರಗಳ (ಎಸಿ) ಪೈಪ್‌ಗಳನ್ನು ಕಿತ್ತು ಹಾನಿಗೊಳಿಸಿದ್ದಾರೆ. ಅಲ್ಲದೆ, ಆಸ್ಪತ್ರೆಯ ಮುಖ್ಯದ್ವಾರದ ಬೀಗ




ಮುರಿದು ಒಳನುಗ್ಗಿ ಕಟ್ಟಡದ ವಿವಿಧ ಭಾಗಗಳಿಗೆ ಹಾನಿ ಮಾಡಿದ್ದಾರೆ ಎನ್ನಲಾಗಿದೆ.

ಕೋಟ್ಯಂತರ ರೂಪಾಯಿ ಸಾರ್ವಜನಿಕ ಹಣ ವೆಚ್ಚ ಮಾಡಿ ನಿರ್ಮಿಸಿರುವ ಆಸ್ಪತ್ರೆ ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದರೂ ಸಾರ್ವಜನಿಕ ಸೇವೆಗೆ ಮುಕ್ತಗೊಳಿಸದಿರುವುದು ನಾಗರಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಆಸ್ಪತ್ರೆಯ ಉದ್ಘಾಟನೆ ವಿಳಂಬವಾಗುತ್ತಿರುವುದರ ಜೊತೆಗೆ ಕಟ್ಟಡದ ನಿರ್ವಹಣೆ ಮತ್ತು ಭದ್ರತೆಯ ಬಗ್ಗೆಯೂ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಸಾರ್ವಜನಿಕರು ದೂರಿದ್ದಾರೆ.

ಆಸ್ಪತ್ರೆಗೆ ಸೂಕ್ತ ಭದ್ರತೆ ಕಲ್ಪಿಸದಿದ್ದರೆ ಮುಂದಿನ ದಿನಗಳಲ್ಲಿ ಬೆಲೆಬಾಳುವ ವೈದ್ಯಕೀಯ ಉಪಕರಣಗಳು, ವಿದ್ಯುತ್ ಸಾಮಗ್ರಿಗಳು ಹಾಗೂ ಇತರ ಸೌಲಭ್ಯಗಳು ಕಳ್ಳತನವಾಗುವ ಆತಂಕವಿದೆ. ಇಂತಹ ಘಟನೆಗಳು ಮರುಕಳಿಸಿದರೆ ಅದಕ್ಕೆ

2ನೇ ಪುಟಕ್ಕೆ

## ನವರಾತ್ರಿ ಮೊದಲ ದಿನ ಶ್ರೀ ವಾಸವಿ ಅಮ್ಮನವರಿಗೆ ಮುತ್ತಿನ ಅಲಂಕಾರ



ಮಾನ್ವಿ: ಪಟ್ಟಣದ ಶ್ರೀ ನಗರೇಶ್ವರ ಸ್ವಾಮಿ ಹಾಗೂ ಶ್ರೀ ವಾಸವಿ ಮಾತೆಯ ದೇವಸ್ಥಾನದಲ್ಲಿ ನವರಾತ್ರಿ ಮಹೋತ್ಸವದ ಮೊದಲ ದಿನದ ಅಂಗವಾಗಿ ಶ್ರೀ ವಾಸವಿ ಅಮ್ಮನವರಿಗೆ ಮುತ್ತುಗಳಿಂದ ವಿಶೇಷ ಅಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು.

ನವರಾತ್ರಿ ಉತ್ಸವದ ಹಿನ್ನೆಲೆಯಲ್ಲಿ ದೇವಿಯ ಮೂರ್ತಿಯನ್ನು ಮುತ್ತುಗಳಿಂದ ಅಲಂಕರಿಸಲಾಗಿದ್ದು, ವಿಶೇಷ ಪೂಜೆ ಹಾಗೂ ಮಂಗಳಾರತಿ ನೆರವೇರಿಸಲಾಯಿತು. ಮುತ್ತಿನ ಅಲಂಕಾರದಲ್ಲಿ ಕಂಗೊಳಿಸಿದ ಶ್ರೀ ವಾಸವಿ ಅಮ್ಮನವರ ದರ್ಶನ ಪಡೆದು ಭಕ್ತರು ಭಕ್ತಿ ಸಮರ್ಪಿಸಿದರು.

## ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿಗೆ 1008 ಗೆಜ್ಜೆ ವಸ್ತ್ರಗಳಿಂದ ವಿಶೇಷ ಅಲಂಕಾರ



ಮಾನ್ವಿ: ಪಟ್ಟಣದ ಬ್ರಾಹ್ಮಣವಾಡಿಯಲ್ಲಿರುವ ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಅಂಗವಾಗಿ ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, 1008 ಗೆಜ್ಜೆ ವಸ್ತ್ರಗಳಿಂದ ಆಕರ್ಷಕವಾಗಿ ಅಲಂಕರಿಸಲಾಯಿತು.

ನವರಾತ್ರಿ ಮಹೋತ್ಸವದ ಹಿನ್ನೆಲೆಯಲ್ಲಿ ಸ್ವಾಮಿಗೆ ವಿಶೇಷ ಅಲಂಕಾರ ಮಾಡಿ, ಧಾರ್ಮಿಕ ವಿಧಿವಿಧಾನಗಳೊಂದಿಗೆ ಪೂಜೆ ನೆರವೇರಿಸಲಾಯಿತು. 1008 ಗೆಜ್ಜೆ ವಸ್ತ್ರಗಳ ಅಲಂಕಾರದಲ್ಲಿ ಕಂಗೊಳಿಸಿದ ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದು ಭಕ್ತರು ಭಕ್ತಿಭಾವದಿಂದ ಪ್ರಾರ್ಥನೆ ಸಲ್ಲಿಸಿದರು.

## ಗಾಣದಾಳ-ಸೋಮನಮರಡಿ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸಲು ಆಗ್ರಹಿಸಿ ಅ.12ರಂದು ಪ್ರತಿಭಟನೆ



ಜಾಲಹಳ್ಳಿ, ಅ.11: ಗಾಣದಾಳ ಹಾಗೂ ಸೋಮನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಿ, ಜಾಲಹಳ್ಳಿ ಹೋಬಳಿಯಲ್ಲಿಯೇ ಮುಂದುವರಿಸಬೇಕೆಂದು ಒತ್ತಾಯಿಸಿ ಅಕ್ಟೋಬರ್ 12ರಂದು ಜಾಲಹಳ್ಳಿ ನಾಡಕಚೇರಿ ಮುಂಭಾಗ ಬೃಹತ್ ಪ್ರತಿಭಟನೆ ನಡೆಸಲು ಗ್ರಾಮಸ್ಥರು ನಿರ್ಧರಿಸಿದ್ದಾರೆ.

ಪಟ್ಟಣದಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಗ್ರಾಮಗಳ ಮುಖಂಡರು, ಸೋಮವಾರ ಶ್ರೀ ರಂಗನಾಥ ದೇವಸ್ಥಾನದಿಂದ ಪ್ರತಿಭಟನಾ ಮೆರವಣಿಗೆ ಆರಂಭಿಸಿ ನಾಡಕಚೇರಿಗೆ ತೆರಳಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಗ್ರಾಮಸ್ಥರ ನ್ಯಾಯಯುತ ಬೇಡಿಕೆಗೆ ಸ್ಪಂದಿಸುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

ವಕೀಲ ಬಸವರಾಜ್ ಗಾಣದಾಳ ಮಾತನಾಡಿ, ಗಾಣದಾಳ ಹಾಗೂ ಸೋಮನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸುವುದು ಸ್ಥಳೀಯರ ಬಹುದಿನಗಳ ಬೇಡಿಕೆಯಾಗಿದೆ. ಪ್ರಸ್ತುತ ಪಹಣಿ, ಮ್ಯುಟೇಷನ್ ಸೇರಿದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ಕೆಲಸಗಳಿಗಾಗಿ ರೈತರು ಹಾಗೂ ಸಾರ್ವಜನಿಕರು ಸಮೀಪದ ಜಾಲಹಳ್ಳಿಯನ್ನು ಬಿಟ್ಟು ದೂರದ ಅರಕೇರಾಕ್ಕೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸಮಯ ಮತ್ತು ಹಣ ವ್ಯರ್ಥವಾಗುವುದರ ಜೊತೆಗೆ ರೈತರು, ವೃದ್ಧರು ಹಾಗೂ ಸಾಮಾನ್ಯ ಜನರು ತೊಂದರೆ ಅನುಭವಿಸುವಂತಾಗಿದೆ ಎಂದು ಹೇಳಿದರು.

ಮುಖಂಡ ಸಾಬಣ್ಣ ಕಮ್ಮಾಲದಿನ್ನಿ ಮಾತನಾಡಿ, ಗ್ರಾಮಗಳ ಆಡಳಿತಾತ್ಮಕ ಅನುಕೂಲತೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಗಾಣದಾಳ ಮತ್ತು ಸೋಮನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳನ್ನು ಜಾಲಹಳ್ಳಿ ಹೋಬಳಿಯಲ್ಲಿಯೇ ಉಳಿಸಿ ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಬೇಕು. ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಗ್ರಾಮಸ್ಥರ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗೆ ಸರ್ಕಾರ ಸ್ಪಂದಿಸದಿದ್ದರೆ ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ಬಹಿಷ್ಕರಿಸುವ ನಿರ್ಧಾರ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಮರೇಗೌಡ ಕಮ್ಮಾಲದಿನ್ನಿ, ಶಿವನಗೌಡ ದೇಸಾಯಿ, ಶರಣಗೌಡ ಕಮ್ಮಾಲದಿನ್ನಿ, ವೆಂಕಟರೆಡ್ಡಿ ಕಕ್ಕಲದೊಡ್ಡಿ, ಸಾಬಣ್ಣ ಹೂಗಾರ್, ಅಯ್ಯನ್ ಗೌಡ ಮಾಸ್ತಿ, ಶಿವು ಪಾಟೀಲ್, ವಕೀಲ ವಸಂತ್ ಕುಮಾರ್, ನಾಗರಾಜ್, ಅಬ್ರಹಾಂ ಕಮ್ಮಾಲದಿನ್ನಿ, ಹನುಮಂತ್ ಸೋಮನಮರಡಿ, ಎಂ.ಆರ್. ಬಸವ ಸೇರಿದಂತೆ ಗಾಣದಾಳ ಹಾಗೂ ಸೋಮನಮರಡಿ ಗ್ರಾಮಗಳ ಮುಖಂಡರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

### ರಷ್ಯಾ-ಉಕ್ರೇನ್ ನಡುವೆ ಇಂಧನ ಕದನ ವಿರಾಮಕ್ಕೆ ಒಪ್ಪಿಗೆ: ಡೊನಾಲ್ಡ್ ಟ್ರಂಪ್ ಘೋಷಣೆ

ಯುದ್ಧವನ್ನು ಅಂತ್ಯಗೊಳಿಸಲು ಅಧ್ಯಕ್ಷ ಝೆಲೆನ್ಸ್ಕಿ ಅಗತ್ಯ ಕ್ರಮಗಳನ್ನು ಕೈಗೊಂಡಿಲ್ಲ ಎಂದು ಟೀಕಿಸಿದ್ದ ಅವರು, ಅಮೆರಿಕದಲ್ಲಿ ಡೀಸೆಲ್ ಬೆಲೆ ಏರಿಕೆಯಾಗುತ್ತಿರುವುದಕ್ಕೂ ಉಕ್ರೇನ್‌ನ ದಾಳಿಗಳೇ ಕಾರಣವೆಂದು ಆರೋಪಿಸಿದ್ದರು.

ಇದೀಗ ಟ್ರಂಪ್ ಘೋಷಿಸಿರುವ ಇಂಧನ ಕದನ ವಿರಾಮವು ವಾಸ್ತವದಲ್ಲಿ ಎಷ್ಟರಮಟ್ಟಿಗೆ ಜಾರಿಯಾಗಲಿದೆ ಎಂಬುದು ರಷ್ಯಾ ಮತ್ತು ಉಕ್ರೇನ್‌ನ ಮುಂದಿನ ನಿಲುವುಗಳ ಮೇಲೆ ಅವಲಂಬಿತವಾಗಿದೆ.

### ಡಿ.ಕೆ. ಶಿವಕುಮಾರ್ ವಿರುದ್ಧ ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ

ಅವರ ಮೇಲಿದೆ. ಕಾಂಗ್ರೆಸ್ ನಾಯಕರೊಬ್ಬರ ವಿರುದ್ಧ ಸ್ಟಿಂಗ್ ಆಪರೇಷನ್ ನಡೆದಿದೆ ಎಂಬ ವಿಚಾರ ಪ್ರಸ್ತಾಪವಾದ ಬಳಿಕ ಆ ವಿಷಯ ಏಕೆ ಮೌನಕ್ಕೆ ಜಾರಿತು? ಅದರ ಹಿಂದಿರುವ ಕಾರಣವೇನು ಎಂಬುದನ್ನು ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಶಿವಕುಮಾರ್ ಭೇಟಿಯಾದ ವ್ಯಕ್ತಿಯ ಪಾತ್ರವೇನು ಎಂಬುದು ತನಿಖೆ ಮತ್ತು ಚರ್ಚೆಗೆ ಒಳಪಡಬೇಕಾದ ವಿಷಯವಾಗಿದೆ. ಈ ಕುರಿತು ಅನುಮಾನಗಳಿಗೆ ಅವಕಾಶ ನೀಡದೆ ಸಂಬಂಧಪಟ್ಟ ಮಾಹಿತಿಯನ್ನು ಜನರ ಮುಂದಿಡಬೇಕು ಎಂದು ಕುಮಾರಸ್ವಾಮಿ ಒತ್ತಾಯಿಸಿದರು.

ಸ್ಟಿಂಗ್ ಆಪರೇಷನ್ ವಿಚಾರವಾಗಿ ಇಬ್ಬರು ನಾಯಕರ ನಡುವೆ ಆರೋಪ-ಪ್ರತ್ಯಾರೋಪಗಳು ಮುಂದುವರಿದಿದ್ದು, ಕುಮಾರಸ್ವಾಮಿ ಎತ್ತಿರುವ ಪ್ರಶ್ನೆಗಳಿಗೆ ಶಿವಕುಮಾರ್ ಯಾವ ರೀತಿಯಲ್ಲಿ ಪ್ರತಿಕ್ರಿಯಿಸಲಿದ್ದಾರೆ ಎಂಬುದು ಕುತೂಹಲ ಮೂಡಿಸಿದೆ.

### ವೆಂಕಟೇಶ್ ಗಲಗ ವರ್ಗಾವಣೆ ಹಿಂಪಡೆಯದಿದ್ದರೆ ಜಿಲ್ಲೆ ಬಂದ್: ಶಿವಗನಿ ನಾಯಕ ಜಿಂಕಲ್

ವರ್ಗಾವಣೆ ಆದೇಶವನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ವಿವಿಧ ಇಲಾಖೆಗಳಲ್ಲಿ ಭ್ರಷ್ಟಾಚಾರ ಹಾಗೂ ಕರ್ತವ್ಯಲೋಪದ ಆರೋಪಗಳನ್ನು ಎದುರಿಸುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದೆ, ಪ್ರಾಮಾಣಿಕ ಅಧಿಕಾರಿಗಳನ್ನು ಮಾತ್ರ ವರ್ಗಾವಣೆ ಮಾಡಲಾಗುತ್ತಿದೆ ಎಂದು ದೂರಿದರು.

ಅರಕೇರಾ ತಾಲೂಕು ಪಂಚಾಯಿತಿಯ ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ಅಣ್ಣಾರಾವ್, ಸಿರವಾರ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಹಟ್ಟಿ ಹಾಗೂ ಅರಕೇರಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಚನ್ನಬಸವ ಅವರ ವಿರುದ್ಧ ಅಕ್ರಮಗಳ ಆರೋಪಗಳಿದ್ದರೂ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು. ಈ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರೆಂದು ಕಂಡುಬಂದವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಜಿಲ್ಲಾ ಪಂಚಾಯಿತಿಯಲ್ಲಿ ಸುಮಾರು 10ರಿಂದ 12 ವರ್ಷಗಳಿಂದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆಪ್ತ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ವಾಹಿದ್ ಅವರನ್ನು ವರ್ಗಾವಣೆ ಮಾಡದಿರುವುದಕ್ಕೆ ಕಾರಣವೇನು ಎಂದು ಪ್ರಶ್ನಿಸಿದರು.

ಮಾನ್ವಿ ತಾಲೂಕಿನ ಪೊಲೀಸ್ ಇನ್‌ಸ್ಪೆಕ್ಟರ್ ಸೋಮಶೇಖರ್ ಎಸ್. ಕೆಂಚರೆಡ್ಡಿ ಅವರ ವಿರುದ್ಧವೂ ಹಲವು ಆರೋಪಗಳಿದ್ದು, ಕಳೆದ ಆಗಸ್ಟ್‌ನಲ್ಲಿ ಸಮವಸ್ತ್ರದಲ್ಲಿಯೇ ಬಾರ್ ಮತ್ತು ರೆಸ್ಟೋರೆಂಟ್‌ನಲ್ಲಿ ಹುಟ್ಟುಹಬ್ಬ ಆಚರಿಸಿಕೊಂಡಿರುವ ಕುರಿತು ಆರೋಪ ಕೇಳಿಬಂದಿದೆ. ಈ ಬಗ್ಗೆ ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ವಿವಿಧ ಅಧಿಕಾರಿಗಳ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ಕ್ರಮ ಕೈಗೊಳ್ಳದಿರುವುದಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರ ಕಾರ್ಯವೈಖರಿಯನ್ನೂ ಪ್ರಶ್ನಿಸಿದ ಅವರು, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು ಈ ಎಲ್ಲ ವಿಷಯಗಳ ಕುರಿತು ಸ್ಪಷ್ಟನೆ ನೀಡಬೇಕು. ವೆಂಕಟೇಶ್ ಗಲಗ ಅವರ ವರ್ಗಾವಣೆ ಆದೇಶವನ್ನು ಕೂಡಲೇ ಹಿಂಪಡೆಯದಿದ್ದರೆ ಜಿಲ್ಲೆಯ ಎಲ್ಲ ವಾಲ್ಮೀಕಿ ನಾಯಕ ಸಂಘಟನೆಗಳ ಒಕ್ಕೂಟದ ಸಭೆ ಕರೆದು ಮುಂದಿನ ಹೋರಾಟದ ರೂಪುರೇಷೆಗಳನ್ನು ನಿರ್ಧರಿಸಲಾಗುವುದು. ಅಗತ್ಯವಿದ್ದರೆ ರಾಯಚೂರು ಜಿಲ್ಲೆ ಬಂದ್ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ವೆಂಕಟೇಶ್ ಗೌಡ, ಪಾಟೀಲ್, ಜೇಮ್ಸ್, ಅನಿಲ್ ಕುಮಾರ ಹಾಗೂ ಉದಯ ಕುಮಾರ್ ಉಪಸ್ಥಿತರಿದ್ದರು.

### ಅಂಬೇಡ್ಕರ್ ಪ್ರೀಮಿಯರ್ ಲೀಗ್2026 ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ

ಕ್ರೀಡೆಯಲ್ಲಿ ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಉತ್ತಮ ಕ್ರೀಡಾ ಮನೋಭಾವ ಪ್ರದರ್ಶಿಸಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ರಾಂಪಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹನುಮತಿ ರಾಂಪಳ್ಳಿ, ಶಿವರಾಜ್ ಪಾಣಿ ಜಾಲಹಳ್ಳಿ, ಸುರೇಶ್ ಚಿತ್ತಕುಂಟಿ, ಬಾಳಪ್ಪ ಬಾವಿಮನಿ, ರಮೇಶ್ ಬಾವಿಮನಿ, ವೈದ್ಯಾಧಿಕಾರಿ ಹುಲಿಮನಿಗೌಡ, ಸಾಬಣ್ಣ ಗಾಣದಾಳ, ಬಸವರಾಜ್ ಮಂಡಲಗುಡ್ಡ, ಶಿವಪ್ಪ ಜಲ್ಲಿ, ಮೌನೇಶ್ ಗಾಣದಾಳ, ಚನ್ನಬಸವ ನಾಯಕ ಮ್ಯಾಕಲದೊಡ್ಡಿ, ಚನ್ನಪ್ಪ ಭವಾನಿ, ಚಂದಪ್ಪ ಬಾವಿಮನಿ, ಎಂ.ಆರ್. ಬಸವ, ತಿಮ್ಮಣ್ಣ ಬಂಕಲದೊಡ್ಡಿ, ತಿಮ್ಮಣ್ಣ ಮುರಾಳ, ಮೌನೇಶ್ ಜಲ್ಲಿ, ದುರ್ಗಪ್ಪ ಚಿಂಚೋಡಿ, ಬಸವರಾಜ್ ಚಿಂಚೋಡಿ ಸೇರಿದಂತೆ ಕ್ರೀಡಾಪಟುಗಳು, ಸಂಘಟಕರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

### ₹30 ಕೋಟಿ ವೆಚ್ಚದ ತಾಯಿ-ಮಕ್ಕಳ ಆಸ್ಪತ್ರೆ ಕಟ್ಟಡಕ್ಕೆ ಕಿಡಿಗೇಡಿಗಳಿಂದ ಹಾನಿ

ಯಾರು ಹೊಣೆ ಎಂಬ ಪ್ರಶ್ನೆಯನ್ನು ನಾಗರಿಕರು ಮುಂದಿಟ್ಟಿದ್ದಾರೆ.

ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಕೂಡಲೇ ಸ್ಥಳ ಪರಿಶೀಲನೆ ನಡೆಸಿ ಕಟ್ಟಡಕ್ಕೆ ಹಾನಿ ಮಾಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಆಸ್ಪತ್ರೆಯ ಸುರಕ್ಷತೆಗೆ ಅಗತ್ಯ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸುವುದರ ಜೊತೆಗೆ ಉದ್ಘಾಟನೆಗೆ ಇರುವ ಅಡೆತಡೆಗಳನ್ನು ನಿವಾರಿಸಿ, ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಶೀಘ್ರ ಸಾರ್ವಜನಿಕ ಸೇವೆಗೆ ಲೋಕಾರ್ಪಣೆ ಮಾಡಬೇಕು ಎಂದು ಸ್ಥಳೀಯ ನಾಗರಿಕರು ಆಗ್ರಹಿಸಿದ್ದಾರೆ.

## ಅಪರಾಧ ತಡೆಗೆ ಆಧುನಿಕ ತಂತ್ರಜ್ಞಾನ ಬಳಕೆ ಅಗತ್ಯ: ಡಿ.ಕೆ. ಶಿವಕುಮಾರ್

ಬೆಂಗಳೂರು: ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಶನಿವಾರ ಬೆಂಗಳೂರಿನ ರಿಚ್ಮಂಡ್ ರಸ್ತೆಯಲ್ಲಿರುವ ಕೇಂದ್ರ ಕಮಾಂಡ್ ಸೆಂಟರ್ ಹಾಗೂ ಸಮಗ್ರ ಪೊಲೀಸ್ ಭವನಕ್ಕೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಭೇಟಿ ನೀಡಿ ಪೊಲೀಸ್ ಇಲಾಖೆಯ ಕಾರ್ಯನಿರ್ವಹಣೆ ಮತ್ತು ತಾಂತ್ರಿಕ ಸೌಲಭ್ಯಗಳ ಕುರಿತು ಮಾಹಿತಿ ಪಡೆದ ಬಳಿಕ ಅವರು ಮಾತನಾಡಿದರು.

ಬದಲಾಗುತ್ತಿರುವ ಕಾಲಘಟ್ಟದಲ್ಲಿ ಅಪರಾಧಗಳ ಸ್ವರೂಪವೂ ಬದಲಾಗುತ್ತಿದ್ದು, ಸಾಂಪ್ರದಾಯಿಕ ಪೊಲೀಸ್ ಕಾರ್ಯವಿಧಾನಗಳ ಜೊತೆಗೆ ಆಧುನಿಕ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದು ಅನಿವಾರ್ಯವಾಗಿದೆ.



ಅಪರಾಧಗಳನ್ನು ಮುಂಚಿತವಾಗಿ ಗುರುತಿಸುವುದು, ಅನುಮಾನಾಸ್ಪದ ಚಟುವಟಿಕೆಗಳ ಮೇಲೆ ನಿಗಾ ವಹಿಸುವುದು ಹಾಗೂ ತುರ್ತು ಸಂದರ್ಭಗಳಲ್ಲಿ ತ್ವರಿತವಾಗಿ ಸ್ಪಂದಿಸುವ ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸಬೇಕಿದೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ದಕ್ಷತೆ ಹೆಚ್ಚಿಸಲು ಕಣ್ಗಾವಲು ವ್ಯವಸ್ಥೆಯ ಆಧುನೀಕರಣಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು. ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಅಪರಾಧ ಚಟುವಟಿಕೆಗಳ ಮೇಲಿನ ನಿಗಾವನ್ನು ಬಲಪಡಿಸುವುದರ ಜೊತೆಗೆ ತಂತ್ರಜ್ಞಾನ ಆಧಾರಿತ ಪೊಲೀಸ್ ಸೇವೆಗಳನ್ನು ವಿಸ್ತರಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ವಿಶೇಷವಾಗಿ ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ಹೊಸ ಸವಾಲಾಗಿ ಪರಿಣಮಿಸುತ್ತಿದ್ದು, ಇಂತಹ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಪೊಲೀಸ್ ಇಲಾಖೆಗೆ ಅಗತ್ಯವಾದ ತಾಂತ್ರಿಕ ಸಾಮರ್ಥ್ಯ ಒದಗಿಸಬೇಕಾಗಿದೆ. ಸೈಬರ್ ಅಪರಾಧಗಳ ಪತ್ತೆ, ತನಿಖೆ ಹಾಗೂ ತಡೆಗಟ್ಟುವ ಕಾರ್ಯಗಳಲ್ಲಿ ಆಧುನಿಕ ಸಾಧನಗಳ ಬಳಕೆಗೆ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಪೊಲೀಸ್ ಸಿಬ್ಬಂದಿ ತಮ್ಮ ಕರ್ತವ್ಯಗಳನ್ನು ಸಮರ್ಥವಾಗಿ ನಿರ್ವಹಿಸಲು ಅಗತ್ಯ ಮೂಲಸೌಕರ್ಯ, ತಾಂತ್ರಿಕ ಉಪಕರಣಗಳು ಹಾಗೂ ಇತರ ಸಂಪನ್ಮೂಲಗಳನ್ನು ಒದಗಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿಯಾಗಿದೆ. ಪೊಲೀಸ್ ವ್ಯವಸ್ಥೆಯ ಆಧುನೀಕರಣದ ಜೊತೆಗೆ ಸಿಬ್ಬಂದಿಯ ಕಾರ್ಯಕ್ಷಮತೆ ಹೆಚ್ಚಿಸುವ ನಿಟ್ಟಿನಲ್ಲಿಯೂ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಾರ್ವಜನಿಕರಿಗೆ ಸುರಕ್ಷಿತ ವಾತಾವರಣ ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಹೊಸ ಭದ್ರತಾ ಸವಾಲುಗಳನ್ನು ಸಮರ್ಥವಾಗಿ ಎದುರಿಸುವ ತಂತ್ರಜ್ಞಾನ ಆಧಾರಿತ ಪೊಲೀಸ್ ವ್ಯವಸ್ಥೆಯನ್ನು ರೂಪಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## ಅಮೃತ ವಾಣಿ

ಮನಸಲ್ಲಿ ಪ್ರೀತಿ ಇಲ್ಲದೆ ಕಲ್ಲು ಕಟ್ಟಿಗೆಯಿಂದ ಎಷ್ಟು ದೊಡ್ಡ ಮನೆ ಕಟ್ಟಿದರೆ ಏನು ಪ್ರಯೋಜನ.

## 1613 ನೆಯ ದಿನಕ್ಕೆ ಏಮ್ಸ್ ಹೋರಾಟ

अखिल भारतीय आयुर्विज्ञान संस्थान ALL INDIA INSTITUTE OF MEDICAL SCIENCES शरीरमाद्यं खलु धर्मसाधनम्

## ಸ್ಟಿಂಗ್ ಆಪರೇಷನ್ ಆರೋಪದಿಂದ ರಾಜ್ಯ ರಾಜಕೀಯದಲ್ಲಿ ಸಂಚಲನ: ಸ್ಪಷ್ಟನೆಗೆ ಹೆಚ್ಚಿದ ಒತ್ತಾಯ

ಬೆಂಗಳೂರು: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಹಾಗೂ ಮತದಾರರ ಹೆಸರುಗಳನ್ನು ತೆಗೆದುಹಾಕಲು ಬೃಹತ್ ಪ್ರಮಾಣದಲ್ಲಿ ಫಾರ್ಮ್-7 ಅರ್ಜಿಗಳನ್ನು ಸಲ್ಲಿಸಲಾಗಿದೆ ಎಂಬ ಆರೋಪಗಳ ನಡುವೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮನ್ನು ಹಾಗೂ ಸರ್ಕಾರದ ಸಚಿವರನ್ನು ಗುರಿಯಾಗಿಸಿಕೊಂಡು ಸ್ಟಿಂಗ್ ಆಪರೇಷನ್ ನಡೆಸಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿರುವುದು ರಾಜ್ಯ ರಾಜಕೀಯದಲ್ಲಿ ಹೊಸ ವಿವಾದಕ್ಕೆ ಕಾರಣವಾಗಿದೆ.

ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಸ್ಟಿಂಗ್ ಆಪರೇಷನ್‌ಗಳ ಬಗ್ಗೆ ಎಚ್ಚರಿಕೆಯಿಂದ ಇರುವಂತೆ ಸಚಿವರಿಗೆ ಸೂಚಿಸಲಾಗಿದೆ ಎನ್ನಲಾಗಿದೆ. ತಮ್ಮ ವಿರುದ್ಧ ಇಂತಹ ಪ್ರಯತ್ನಗಳು ನಡೆಯುತ್ತಿರುವ ಕುರಿತು ಸಾಕ್ಷ್ಯಗಳಿದ್ದು, ಅದರ ಹಿಂದಿರುವ ವ್ಯಕ್ತಿಗಳ ಬಗ್ಗೆಯೂ ಮಾಹಿತಿ ಇದೆ ಎಂದು ಡಿ.ಕೆ. ಶಿವಕುಮಾರ್ ಹೇಳಿಕೊಂಡಿರುವುದು ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷಗಳ ನಡುವೆ ವಾಗ್ವಾದಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರದ ವರ್ಚಸ್ಸಿಗೆ ಧಕ್ಕೆ ತರುವ ಉದ್ದೇಶದಿಂದ ಇಂತಹ ಪ್ರಯತ್ನಗಳು ನಡೆಯುತ್ತಿವೆ ಎಂಬ ಅನುಮಾನವನ್ನು ಕಾಂಗ್ರೆಸ್ ನಾಯಕರು ವ್ಯಕ್ತಪಡಿಸಿದ್ದಾರೆ. ದೆಹಲಿಯಲ್ಲಿ ಕೇಂದ್ರ ಸಚಿವರೊಬ್ಬರು ಖಾಸಗಿ ಏಜೆನ್ಸಿಯನ್ನು ಬಳಸಿಕೊಂಡು ರಾಜ್ಯದ ಸಚಿವರನ್ನು ಗುರಿಯಾಗಿಸಲು ಮುಂದಾಗಿದ್ದಾರೆ ಎಂದು ಕೆಲವರು ಆರೋಪಿಸಿದ್ದಾರೆ. ಸುಮಾರು 10 ಸಚಿವರು ಹಾಗೂ ಹಿರಿಯ ಅಧಿಕಾರಿಗಳ ವಿರುದ್ಧ ಸಂಚು ರೂಪಿಸಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ. ಆದರೆ ಈ ಆರೋಪಗಳಿಗೆ ಸಂಬಂಧಿಸಿದಂತೆ ಅಧಿಕೃತ



ಸಾಕ್ಷ್ಯಗಳು ಸಾರ್ವಜನಿಕವಾಗಿ ಬಹಿರಂಗವಾಗಿಲ್ಲ.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಡಿ.ಕೆ. ಶಿವಕುಮಾರ್ ಅವರ ಹೇಳಿಕೆಯನ್ನು ಪ್ರಶ್ನಿಸಿದ್ದು, ಸ್ಟಿಂಗ್ ಆಪರೇಷನ್ ಕುರಿತು ಮಾಹಿತಿ ಇದ್ದರೆ ಅದನ್ನು ಬಹಿರಂಗಪಡಿಸಬೇಕು ಎಂಬ ನಿಲುವು ವ್ಯಕ್ತಪಡಿಸಿದ್ದಾರೆ. ಇಂತಹ ಆರೋಪಗಳನ್ನು ಮುಂದಿಡುತ್ತಿರುವ ಸಮಯದ ಬಗ್ಗೆಯೂ ಅವರು ಅನುಮಾನ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಪ್ರಮುಖ ನಾಯಕರಿಗೆ ಸ್ಟಿಂಗ್ ಆಪರೇಷನ್ ಕುರಿತು ಮಾಹಿತಿ ಇದ್ದರೆ ಈವರೆಗೆ ಪೊಲೀಸ್ ದೂರು ಏಕೆ ದಾಖಲಿಸಿಲ್ಲ ಎಂಬ ಪ್ರಶ್ನೆ ಉದ್ಭವಿಸಿದೆ. ರಾಜ್ಯದ ಗುಪ್ತಚರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಈ ಬಗ್ಗೆ ಮಾಹಿತಿ ಇದೆಯೇ, ಮಾಹಿತಿ ಇದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬುದರ ಕುರಿತು ಸ್ಪಷ್ಟನೆ ನೀಡಬೇಕೆಂಬ ಒತ್ತಾಯ ಕೇಳಿಬರುತ್ತಿದೆ.

ಕರ್ನಾಟಕ ರಾಜಕೀಯದಲ್ಲಿ ಈ ಹಿಂದೆಯೂ ಸಿಡಿ, ಪೆನ್‌ಡ್ರೈವ್ ಹಾಗೂ ರಹಸ್ಯ ವಿಡಿಯೊ ಪ್ರಕರಣಗಳು ಭಾರಿ ಚರ್ಚೆಗೆ ಕಾರಣವಾಗಿವೆ. 2021ರಲ್ಲಿ ಅಂದಿನ ಸಚಿವ ರಮೇಶ್ ಜಾರಕಿಹೊಳಿ ಅವರು ಆಕ್ಷೇಪಾರ್ಹ ವಿಡಿಯೊ ವಿವಾದದ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. 2024ರ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಜೆಡಿಎಸ್ ನಾಯಕ ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪಗಳಿಗೆ ಸಂಬಂಧಿಸಿದ ವಿಡಿಯೊಗಳು ಬಹಿರಂಗವಾಗಿ ರಾಜಕೀಯ ಸಂಚಲನ ಸೃಷ್ಟಿಸಿದ್ದವು.

ಇಂತಹ ಘಟನೆಗಳ ಹಿನ್ನೆಲೆಯಲ್ಲಿ ಸಾರ್ವಜನಿಕ ಜೀವನದಲ್ಲಿ ನೈತಿಕತೆ, ರಾಜಕೀಯ ಹೊಣೆಗಾರಿಕೆ ಹಾಗೂ ಖಾಸಗಿತನದ ರಕ್ಷಣೆಯ ಕುರಿತು ಚರ್ಚೆಗಳು ನಡೆಯುತ್ತಿವೆ. ಸ್ಟಿಂಗ್ ಆಪರೇಷನ್ ಹೆಸರಿನಲ್ಲಿ ರಾಜಕೀಯ ನಾಯಕರನ್ನು ಗುರಿಯಾಗಿಸುವ ಪ್ರಯತ್ನಗಳು ನಡೆದಿದ್ದರೆ ಅವುಗಳ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸಬೇಕೆಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ಇದರ ನಡುವೆಯೇ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯೂ ರಾಜಕೀಯ ಸಂಘರ್ಷಕ್ಕೆ ಕಾರಣವಾಗಿದೆ. ಮತದಾರರ ಹೆಸರುಗಳನ್ನು ತೆಗೆದುಹಾಕುವ ಉದ್ದೇಶದಿಂದ ಬೃಹತ್ ಪ್ರಮಾಣದಲ್ಲಿ ಫಾರ್ಮ್-7 ಅರ್ಜಿಗಳನ್ನು ಸಲ್ಲಿಸಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಮತದಾರರ ಹಕ್ಕುಗಳನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂಬುದು ಪಕ್ಷದ ವಾದವಾಗಿದೆ.

ಫಾರ್ಮ್-7 ಅರ್ಜಿಗಳಲ್ಲಿ ಸುಳ್ಳು ಮಾಹಿತಿ ನೀಡಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿರುವುದು ಮತ್ತೊಂದು ವಿವಾದಕ್ಕೆ ಕಾರಣವಾಗಿದೆ. ಚುನಾವಣಾ ಆಯೋಗದಿಂದ ದೂರು ಸಲ್ಲಿಕೆಯಾಗದಿದ್ದರೂ ಪೊಲೀಸರು ಸ್ವಯಂಪ್ರೇರಿತವಾಗಿ ಕ್ರಮ ಕೈಗೊಳ್ಳಬಹುದೇ ಎಂಬ ಕಾನೂನಾತ್ಮಕ ಪ್ರಶ್ನೆಯೂ ಚರ್ಚೆಗೆ ಬಂದಿದೆ.

ರಾಜ್ಯದ ಎನ್‌ಡಿಎ ನಾಯಕರು ಪೊಲೀಸ್ ಕ್ರಮವನ್ನು ಎಸ್‌ಐಆರ್ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರದ ಹಸ್ತಕ್ಷೇಪ ಎಂದು ಆರೋಪಿಸಿದ್ದು, ರಾಜ್ಯಪಾಲರು ಮಧ್ಯಪ್ರವೇಶಿಸಬೇಕೆಂದು ಒತ್ತಾಯಿಸಿದ್ದಾರೆ. ಮತ್ತೊಂದೆಡೆ, ಮತದಾರರ ಹಕ್ಕುಗಳ ರಕ್ಷಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ರಾಜ್ಯ ಸರ್ಕಾರ ತನ್ನ ನಿಲುವನ್ನು ಸಮರ್ಥಿಸಿಕೊಂಡಿದೆ. ಈ ವಿವಾದ ನ್ಯಾಯಾಲಯದ ಮೆಟ್ಟಿಲನ್ನೂ ಏರಿದೆ.

ಎಸ್‌ಐಆರ್ ಪ್ರಕ್ರಿಯೆಯನ್ನು ವಿರೋಧಿಸಿ ಕಾಂಗ್ರೆಸ್ ಅಕ್ಟೋಬರ್ 10ರಿಂದ 20ರವರೆಗೆ ರಾಜ್ಯಾದ್ಯಂತ ಮತ ಉಳಿಸಿ, ದೇಶ ಉಳಿಸಿ ಅಭಿಯಾನ ನಡೆಸಲು ಯೋಜಿಸಿದೆ. ಮತದಾರರ ಪಟ್ಟಿಯಿಂದ ಅರ್ಹ ಮತದಾರರ ಹೆಸರುಗಳನ್ನು ತೆಗೆದುಹಾಕುವ ಅಪಾಯದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅಭಿಯಾನದ ಉದ್ದೇಶವಾಗಿದೆ ಎಂದು ಪಕ್ಷ ತಿಳಿಸಿದೆ.

ಒಂದೆಡೆ ಸ್ಟಿಂಗ್ ಆಪರೇಷನ್ ಆರೋಪ, ಮತ್ತೊಂದೆಡೆ ಮತದಾರರ ಪಟ್ಟಿ ಪರಿಷ್ಕರಣೆ ವಿವಾದದಿಂದ ರಾಜ್ಯ ರಾಜಕೀಯ ವಾತಾವರಣ ಕಾವೇರಿದೆ. ಈ ಎರಡೂ ವಿಚಾರಗಳಲ್ಲಿ ಕೇಳಿಬಂದಿರುವ ಆರೋಪಗಳ ಕುರಿತು ಸ್ಪಷ್ಟ ಮಾಹಿತಿ ಹಾಗೂ ಕೈಗೊಂಡ ಕ್ರಮಗಳನ್ನು ಬಹಿರಂಗಪಡಿಸುವುದು ಅಗತ್ಯವಾಗಿದೆ. ಆರೋಪ-ಪ್ರತ್ಯಾರೋಪಗಳ ನಡುವೆಯೇ ಸತ್ಯಾಂಶ ಹೊರಬರಬೇಕೆಂಬ ನಿರೀಕ್ಷೆ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

# ಗೌಳಿ ಸಮಾಜದಿಂದ 44ನೇ ವರ್ಷದ ಅಂಬಾಭವಾನಿ ನವರಾತ್ರಿ ಉತ್ಸವಕ್ಕೆ ಅದ್ದೂರಿ ಚಾಲನೆ







ರಾಯಚೂರು: ನಗರದ ವೀರಶೈವ ಗೌಳಿ ಸಮಾಜದವತಿಯಿಂದ ಕಳೆದ 44 ವರ್ಷಗಳಿಂದ ನಿರಂತರವಾಗಿ ಆಚರಿಸಿಕೊಂಡು ಬರುತ್ತಿರುವ ಮಾತಾ ಶ್ರೀ ಅಂಬಾಭವಾನಿ ದೇವಿಯ ನವರಾತ್ರಿ ಮಹೋತ್ಸವಕ್ಕೆ ಭಾನುವಾರ ಭಕ್ತಿಭಾವ ಹಾಗೂ ಸಂಭ್ರಮದಿಂದ ಚಾಲನೆ ನೀಡಲಾಯಿತು. ನಗರದ ಕಿಲ್ಲೆ ಬೃಹನ್ಮಠದ ಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿಯವರು ದೇವಿಯ ಮೂರ್ತಿಯ ಮೆರವಣಿಗೆಗೆ ಚಾಲನೆ ನೀಡುವ ಮೂಲಕ ಉತ್ಸವಕ್ಕೆ ಅಧಿಕೃತವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ಗೌಳಿ ಸಮಾಜವು ಹಲವು ದಶಕಗಳಿಂದ ಅಂಬಾಭವಾನಿ ದೇವಿಯ ಆರಾಧನೆಯೊಂದಿಗೆ ಧಾರ್ಮಿಕ ಪರಂಪರೆಯನ್ನು ಉಳಿಸಿ ಬೆಳೆಸಿಕೊಂಡು ಬರುತ್ತಿರುವುದು ಶ್ಲಾಘನೀಯ. ಬಂಗಿಕುಂಟದಲ್ಲಿ ಸಮಾಜದ ವತಿಯಿಂದ ಪ್ರತಿವರ್ಷ ನವರಾತ್ರಿ ಉತ್ಸವದ ಅಂಗವಾಗಿ ವಿಶೇಷ ಪೂಜೆ, ದೇವಿಯ ಅಲಂಕಾರ ಹಾಗೂ ಅನ್ನದಾಸೋಹ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ನವರಾತ್ರಿ ಉತ್ಸವವು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ ಸಮಾಜದಲ್ಲಿ ಭಕ್ತಿ, ಶಾಂತಿ, ಸೌಹಾರ್ದತೆ ಹಾಗೂ ಒಗ್ಗಟ್ಟಿನ ಮನೋಭಾವ ಬೆಳೆಸುವ ಮಹತ್ವದ ಸಂದರ್ಭವಾಗಿದೆ. ಇಂತಹ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಯುವಜನರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ನಮ್ಮ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಕಿಲ್ಲೆ ಬೃಹನ್ಮಠದಿಂದ ಆರಂಭವಾದ ಶ್ರೀ ಅಂಬಾಭವಾನಿ ದೇವಿಯ ಮೂರ್ತಿಯ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳು ಹಾಗೂ ವಿವಿಧ ವೃತ್ತಗಳ ಮೂಲಕ ಸಾಗಿಬಂದು ಬೇಸ್ತವಾರಪೇಟೆಯ ಶ್ರೀ ಅಂಬಾಭವಾನಿ ವೃತ್ತ ತಲುಪಿತು. ಬಳಿಕ ಧಾರ್ಮಿಕ ವಿಧಿವಿಧಾನಗಳೊಂದಿಗೆ ಘಟಸ್ಥಾಪನೆ ನೆರವೇರಿಸುವ ಮೂಲಕ ನವರಾತ್ರಿ ಪೂಜಾ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಯಿತು.

ಗೌಳಿ ಸಮಾಜದ ವತಿಯಿಂದ ಸತತ 44ನೇ ವರ್ಷ ನವರಾತ್ರಿ ಮಹೋತ್ಸವವನ್ನು ಆಚರಿಸಲಾಗುತ್ತಿದ್ದು, ಒಂಬತ್ತು ದಿನಗಳ ಕಾಲ ಪ್ರತಿದಿನ ಸಂಜೆ ದೇವಿಗೆ ಕುಂಕುಮಾರ್ಚನೆ, ಅಭಿಷೇಕ, ಮಹಾಮಂಗಳಾರತಿ ಹಾಗೂ ವಿವಿಧ ರೂಪಗಳಲ್ಲಿ ವಿಶೇಷ ಅಲಂಕಾರ ಮಾಡಲಾಗುವುದು. ಉತ್ಸವದ ಅವಧಿಯಲ್ಲಿ ಅನ್ನದಾಸೋಹ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಹತ್ತು ದಿನಗಳ ಉತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕು ಎಂದು ಸಮಾಜದ ಪದಾಧಿಕಾರಿಗಳು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಸಮಾಜದ ಅಧ್ಯಕ್ಷ ವಿಶ್ವನಾಥ ಬಹಗನರೆ, ವೀರೇಶ ಲಂಗೋಟೆ, ಕಾರ್ಯದರ್ಶಿ ರಾಮಣ್ಣ ಪಂಗುಡವಾಲೆ, ಶೋಭಾ ಪೀರನಾಯಕ್, ರಮೇಶ ದಿವಟೆ, ಗಣೇಶ ಬಾಬು ಲಂಗೋಟೆ, ಚಂದ್ರಕಾಂತ ಜಿಪರೆ, ಸೂರಿ ಲಂಗೋಟೆ, ಸಾಯತ್ರಾಬಾಯಿ ಬಹಿರವಾಡೆ, ಅನಿತಾ ಅವಿಶೇಕ್ರ್, ನೀಲಾಬಾಯಿ ಲಂಗೋಟೆ, ಏರುಬಾಯಿ ಬಡವಾಣೆ, ಲಲಿತಾ ಗಲಾಂಡೆ ಸೇರಿದಂತೆ ವೀರಶೈವ ಗೌಳಿ ಸಮಾಜದ ಮುಖಂಡರು, ಪದಾಧಿಕಾರಿಗಳು, ಮಹಿಳೆಯರು ಹಾಗೂ ಭಕ್ತರು ಪಾಲ್ಗೊಂಡಿದ್ದರು.

## ಮೂರನೇ ಟಿ20 ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತಕ್ಕೆ 14 ರನ್‌ಗಳ ಜಯ




ನವದೆಹಲಿ: ವೆಸ್ಟ್ ಇಂಡೀಸ್ ವಿರುದ್ಧದ ಐದು ಪಂದ್ಯಗಳ ಟಿ20 ಕ್ರಿಕೆಟ್ ಸರಣಿಯ ಮೂರನೇ ಪಂದ್ಯದಲ್ಲಿ ಭಾರತ ತಂಡ 14 ರನ್‌ಗಳ ರೋಚಕ ಗೆಲುವು ಸಾಧಿಸುವ ಮೂಲಕ ಸರಣಿಯಲ್ಲಿ 2-1 ಅಂತರದ ಮುನ್ನಡೆ ಪಡೆದುಕೊಂಡಿದೆ. ಬ್ಯಾಟಿಂಗ್‌ನಲ್ಲಿ ಅಭಿಷೇಕ್ ಶರ್ಮಾ ಅವರ ಸ್ಫೋಟಕ ಅರ್ಧಶತಕ ಹಾಗೂ ಬೌಲಿಂಗ್‌ನಲ್ಲಿ ಅರ್ಶದೀಪ್ ಸಿಂಗ್ ಅವರ ಪರಿಣಾಮಕಾರಿ ಪ್ರದರ್ಶನ ಭಾರತದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿತು.

ಮೊದಲು ಬ್ಯಾಟಿಂಗ್ ನಡೆಸಿದ ಭಾರತ ತಂಡ 223 ರನ್‌ಗಳಿಗೆ ಆಲ್‌ಔಟ್ ಆಯಿತು. 224 ರನ್‌ಗಳ ಕಠಿಣ ಗುರಿ ಬೆನ್ನಟ್ಟಿದ ವೆಸ್ಟ್ ಇಂಡೀಸ್ ತಂಡ ನಿಗದಿತ 20 ಓವರ್‌ಗಳಲ್ಲಿ ಏಳು ವಿಕೆಟ್ ನಷ್ಟಕ್ಕೆ 209 ರನ್ ಗಳಿಸಲಷ್ಟೇ ಶಕ್ತವಾಯಿತು. ಅಂತಿಮ ಹಂತದವರೆಗೂ ಹೋರಾಟ ನಡೆಸಿದ ಪ್ರವಾಸಿ ತಂಡ ಗೆಲುವಿನ ಗುರಿ ತಲುಪಲು ವಿಫಲವಾಯಿತು.

ಭಾರತದ ಪರ ಆರಂಭಿಕ ಬ್ಯಾಟರ್ ಅಭಿಷೇಕ್ ಶರ್ಮಾ ಆಕ್ರಮಣಕಾರಿ ಆಟವಾಡಿ ಕೇವಲ 30 ಎಸೆತಗಳಲ್ಲಿ ಆರು ಬೌಂಡರಿ ಹಾಗೂ ಐದು ಸಿಕ್ಸರ್‌ಗಳ ನೆರವಿನಿಂದ 69 ರನ್ ಗಳಿಸಿದರು. ಇಶಾನ್ ಕಿಶನ್ 18 ಎಸೆತಗಳಲ್ಲಿ 37 ರನ್ ಬಾರಿಸಿ ಉತ್ತಮ ಬೆಂಬಲ ನೀಡಿದರು. ಈ ಜೋಡಿ ಎರಡನೇ ವಿಕೆಟ್‌ಗೆ 108 ರನ್‌ಗಳ ಮಹತ್ವದ ಜೊತೆಯಾಟವಾಡಿ ತಂಡಕ್ಕೆ ಬೃಹತ್ ಮೊತ್ತ ಕಲೆಹಾಕಲು ಭದ್ರ ಬುನಾದಿ ಹಾಕಿತು.

ಆದರೆ ಈ ಜೋಡಿ ಬೇರ್ಪಟ್ಟ ನಂತರ ಭಾರತದ ಬ್ಯಾಟರ್‌ಗಳು ನಿಯಮಿತ ಅಂತರದಲ್ಲಿ ವಿಕೆಟ್ ಕಳೆದುಕೊಂಡರು. ವೆಸ್ಟ್ ಇಂಡೀಸ್ ಬೌಲರ್‌ಗಳು ಮಧ್ಯಮ ಹಾಗೂ ಅಂತಿಮ ಓವರ್‌ಗಳಲ್ಲಿ ನಿಯಂತ್ರಿತ ದಾಳಿ ನಡೆಸುವ ಮೂಲಕ ಭಾರತದ ರನ್‌ಗಳ ವೇಗಕ್ಕೆ ಕಡಿವಾಣ ಹಾಕಿದರು. ವೆಸ್ಟ್ ಇಂಡೀಸ್ ಪರ ರೋಸ್ಟನ್ ಚೇಸ್ 38 ರನ್ ನೀಡಿ ಎರಡು ವಿಕೆಟ್ ಪಡೆದರೆ, ಶಮರ್ ಸ್ಪ್ರಿಂಗರ್ ಹಾಗೂ ಶಮರ್ ಜೋಸೆಫ್ ತಲಾ ಎರಡು ವಿಕೆಟ್ ಕಬಳಿಸಿದರು.

ಬೃಹತ್ ಗುರಿ ಬೆನ್ನಟ್ಟಿದ ವೆಸ್ಟ್ ಇಂಡೀಸ್ ತಂಡ ಆರಂಭದಲ್ಲೇ ಆಘಾತ ಅನುಭವಿಸಿತು. ನಾಯಕ ಹಾಗೂ ವಿಕೆಟ್ ಕೀಪರ್ ಶೈ ಹೋಪ್ ಅವರನ್ನು ಅರ್ಶದೀಪ್ ಸಿಂಗ್ ಕ್ಲೀನ್ ಬೌಲ್ಡ್ ಮಾಡುವ ಮೂಲಕ ಭಾರತಕ್ಕೆ ಮೊದಲ ಯಶಸ್ಸು ತಂದುಕೊಟ್ಟರು.

ಬಳಿಕ ಶಿಮ್ರಾನ್ ಹೆಟ್ಮೈರ್ ಆಕ್ರಮಣಕಾರಿ ಬ್ಯಾಟಿಂಗ್ ನಡೆಸಿ 26 ಎಸೆತಗಳಲ್ಲಿ 43 ರನ್ ಗಳಿಸಿದರು. ಆದರೆ ಅವರು ಔಟಾದ ನಂತರ ವೆಸ್ಟ್ ಇಂಡೀಸ್ ತಂಡದ ಮೇಲೆ ಒತ್ತಡ ಹೆಚ್ಚಾಯಿತು. ರೋವ್ಮನ್ ಪೊವೆಲ್ ಏಳು ಎಸೆತಗಳಲ್ಲಿ ಐದು ರನ್ ಗಳಿಸಿ ನಿರ್ಗಮಿಸಿದರೆ, ಸ್ಯಾಂಪ್ಸನ್ 21 ರನ್ ಗಳಿಸಿದರು. ಕೀಮೊ ಪಾಲ್ 10 ರನ್ ಹಾಗೂ ಶೆರ್ಫೇನ್ ರುದರ್‌ಫೋರ್ಡ್ 20 ಎಸೆತಗಳಲ್ಲಿ 32 ರನ್ ಗಳಿಸಿ ಹೋರಾಟ ನಡೆಸಿದರು.

ಪಂದ್ಯದ ಅಂತಿಮ ಹಂತದಲ್ಲಿ ಶಮರ್ ಸ್ಪ್ರಿಂಗರ್ ಕೇವಲ 11 ಎಸೆತಗಳಲ್ಲಿ 35 ರನ್ ಸಿಡಿಸಿ ಭಾರತದ ಬೌಲರ್‌ಗಳಿಗೆ ಸವಾಲೊಡ್ಡಿದರು. ರೋಸ್ಟನ್ ಚೇಸ್ ಐದು ರನ್ ಗಳಿಸಿ ಅಜೇಯರಾಗಿ ಉಳಿದರು. ಆದರೆ ಅಗತ್ಯ ರನ್‌ಗಳನ್ನು ಗಳಿಸಲು ಸಾಧ್ಯವಾಗದ ಕಾರಣ ವೆಸ್ಟ್ ಇಂಡೀಸ್ ತಂಡ ಸೋಲೊಪ್ಪಿಕೊಂಡಿತು.

ಭಾರತದ ಪರ ಅರ್ಶದೀಪ್ ಸಿಂಗ್ ಮೂರು ವಿಕೆಟ್ ಕಬಳಿಸಿ ಗಮನ ಸೆಳೆದರು. ನಮನ್ ಧೀರ್ ಎರಡು ವಿಕೆಟ್ ಪಡೆದರೆ, ಅಕ್ಷರ್ ಪಟೇಲ್ ಹಾಗೂ ನಿತೀಶ್ ರೆಡ್ಡಿ ತಲಾ ಒಂದು ವಿಕೆಟ್ ಪಡೆದು ತಂಡದ ಗೆಲುವಿಗೆ ನೆರವಾದರು.

ಈ ಗೆಲುವಿನೊಂದಿಗೆ ಐದು ಪಂದ್ಯಗಳ ಸರಣಿಯಲ್ಲಿ ಭಾರತ 2-1 ಮುನ್ನಡೆ ಸಾಧಿಸಿದ್ದು, ಸರಣಿಯ ನಾಲ್ಕನೇ ಟಿ20 ಪಂದ್ಯ ಅಕ್ಟೋಬರ್ 14ರಂದು ಹೈದರಾಬಾದ್‌ನಲ್ಲಿ ನಡೆಯಲಿದೆ.

## ಜಿಲ್ಲಾ ಪತಂಜಲಿ ಯೋಗ ಸಮಿತಿಯ ನೂತನ ಪದಾಧಿಕಾರಿಗಳ ಪದಗ್ರಹಣ



ರಾಯಚೂರು: ಪತಂಜಲಿ ಯೋಗಪೀಠ ಹರಿದ್ವಾರದ ನಿರ್ದೇಶನದಂತೆ ರಾಯಚೂರು ಜಿಲ್ಲಾ ಪತಂಜಲಿ ಯೋಗ ಸಮಿತಿಯ ನೂತನ ಪದಾಧಿಕಾರಿಗಳ ಆಯ್ಕೆ ಹಾಗೂ ಪದಗ್ರಹಣ ಸಮಾರಂಭವು ನಗರದ ಎಲ್.ವಿ.ಡಿ. ಪದವಿ ಮಹಾವಿದ್ಯಾಲಯದ ಆವರಣದಲ್ಲಿ ನಡೆಯಿತು.

ಕರ್ನಾಟಕ ರಾಜ್ಯ ಪ್ರಭಾರಿ ಭವರಲಾಲ್ ಜಿ ಅವರ ನೇತೃತ್ವದಲ್ಲಿ ನಡೆದ ಸಮಾರಂಭದಲ್ಲಿ ವಿಠೋಬ್ ರಾವ್, ಜೆ.ಡಿ. ಪಟೇಲ್, ಲಕ್ಷ್ಮಣ ಮೇದಾರ ಹಾಗೂ ಪರಮೇಶ್ವರ ಸಾಲಿಮಠ ಅವರ ಮಾರ್ಗದರ್ಶನದಲ್ಲಿ ಪತಂಜಲಿ ಯೋಗ ಸಮಿತಿಯ ವಿವಿಧ ವಿಭಾಗಗಳಿಗೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ರಾಯಚೂರು ಜಿಲ್ಲಾ ಪತಂಜಲಿ ಯೋಗ ಸಮಿತಿಯ ಜಿಲ್ಲಾ ಪ್ರಭಾರಿಯಾಗಿ ಕಿಶೋರ್ ಕುಮಾರ್ ಹಾಗೂ ಸಹಪ್ರಭಾರಿಯಾಗಿ ಶ್ರೀಪಾದ ಸಿಎ ಅವರನ್ನು ನೇಮಿಸಲಾಯಿತು. ಭಾರತ್ ಸ್ವಾಭಿಮಾನ ಟ್ರಸ್ಟ್‌ನ ಪ್ರಭಾರಿಯಾಗಿ ಖುತುರಾಜ್ ಗೌಡ್, ಸಹಪ್ರಭಾರಿಯಾಗಿ ಮರಡಿ ಲಕ್ಷ್ಮೀನರಸಯ್ಯ, ಕಿಸಾನ್ ಸೇವಾ ಸಮಿತಿಯ ಪ್ರಭಾರಿಯಾಗಿ ಗುಲ್ದಾಸ್ ನಾಗರಾಜ ಹಾಗೂ ಸಹಪ್ರಭಾರಿಯಾಗಿ ಜನಾರ್ದನ್ ಅವರನ್ನು ಆಯ್ಕೆ ಮಾಡಲಾಯಿತು.

ಯುವ ಭಾರತ್ ವಿಭಾಗದ ಪ್ರಭಾರಿಯಾಗಿ ನಾಗಾರ್ಜುನ್, ಸಹಪ್ರಭಾರಿಯಾಗಿ ಬಿ.ಟಿ. ಅಂಬರೀಶ್, ಸಾಮಾಜಿಕ ಜಾಲತಾಣ ವಿಭಾಗದ ಪ್ರಭಾರಿಯಾಗಿ ರವೀಂದ್ರ ಥೋರತ್ ಬಂಡಿ ಹಾಗೂ ಸಹಪ್ರಭಾರಿಯಾಗಿ ವೀರೇಶ್ ಗುಂಜಳ್ಳಿ ಅವರಿಗೆ ಜವಾಬ್ದಾರಿ ವಹಿಸಲಾಯಿತು.

ಇದೇ ಸಂದರ್ಭದಲ್ಲಿ ಉತ್ತರ ಕರ್ನಾಟಕ ರಾಜ್ಯ ಮಹಿಳಾ ಪ್ರಭಾರಿ ಶ್ರೀದೇವಿ ಅಶೋಕ್ ಕುಮಾರ್ ಅವರ ನೇತೃತ್ವದಲ್ಲಿ ರಾಯಚೂರು ಜಿಲ್ಲಾ ಮಹಿಳಾ ಪತಂಜಲಿ ಯೋಗ ಸಮಿತಿಯ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಮಹಿಳಾ ಸಮಿತಿಯ ಜಿಲ್ಲಾ ಪ್ರಭಾರಿಯಾಗಿ ರಾಜೇಶ್ವರಿ ನಾಗಾರ್ಜುನ್, ಸಹಪ್ರಭಾರಿಯಾಗಿ ಕಸ್ತೂರಿ, ಸಾಮಾಜಿಕ ಜಾಲತಾಣ ವಿಭಾಗದ ಪ್ರಭಾರಿಯಾಗಿ ಶಿಲ್ಪಾ ಖುತುರಾಜ್ ಹಾಗೂ ಸಂವಾದ ವಿಭಾಗದ ಪ್ರಭಾರಿಯಾಗಿ ಬಿ.ಟಿ. ಜಯಲಕ್ಷ್ಮಿ ಅವರನ್ನು ನೇಮಿಸಲಾಯಿತು.

ನೂತನ ಪದಾಧಿಕಾರಿಗಳು ಜಿಲ್ಲೆಯಾದ್ಯಂತ ಯೋಗಾಭ್ಯಾಸದ ಮಹತ್ವವನ್ನು ಸಾರ್ವಜನಿಕರಿಗೆ ತಲುಪಿಸುವುದು, ಯೋಗದ ಮೂಲಕ ಆರೋಗ್ಯ ಜಾಗೃತಿ ಮೂಡಿಸುವುದು ಹಾಗೂ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಯೋಗ ಚಟುವಟಿಕೆಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

ಪತಂಜಲಿ ಯೋಗ ಸಮಿತಿಯ ವಿವಿಧ ವಿಭಾಗಗಳ ನಡುವೆ ಸಮನ್ವಯ ಸಾಧಿಸಿ, ಯೋಗ ಶಿಕ್ಷಣ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಸಂಘಟಿತವಾಗಿ ನಡೆಸುವ ಜವಾಬ್ದಾರಿಯನ್ನು ನೂತನ ಪದಾಧಿಕಾರಿಗಳಿಗೆ ವಹಿಸಲಾಗಿದೆ.

ಪದಗ್ರಹಣ ಸಮಾರಂಭದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಪತಂಜಲಿ ಯೋಗ ಸಮಿತಿಯ ಸದಸ್ಯರು, ಮಹಿಳಾ ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯ ಯೋಗ ಸಾಧಕರು ಭಾಗವಹಿಸಿದ್ದರು.

## ಯೆಮೆನ್‌ಗೆ ತೆರಳುತ್ತಿದ್ದ ವಲಸಿಗರ ದೋಣಿ ಮುಳುಗಿ 109 ಮಂದಿ ಸಾವು, 116ಕ್ಕೂ ಹೆಚ್ಚು ಜನ ನಾಪತ್ತೆ



ಯೆಮೆನ್: ಉತ್ತಮ ಉದ್ಯೋಗ ಹಾಗೂ ಬದುಕಿನ ಅವಕಾಶಗಳನ್ನು ಅರಸಿ ಸಮುದ್ರ ಮಾರ್ಗವಾಗಿ ಯೆಮೆನ್‌ಗೆ ತೆರಳುತ್ತಿದ್ದ ವಲಸಿಗರ ದೋಣಿ ಮಗುಚಿಬಿದ್ದು ಭೀಕರ ದುರಂತ ಸಂಭವಿಸಿದೆ. ಅಕ್ಟೋಬರ್ 8 ಮತ್ತು 9ರ ನಡುವಿನ ರಾತ್ರಿ ಜಿಬೌಟಿಯಿಂದ ಸುಮಾರು 305 ವಲಸಿಗರನ್ನು ಹೊತ್ತೊಯ್ಯುತ್ತಿದ್ದ ದೋಣಿ ಸಮುದ್ರದಲ್ಲಿ ಮುಳುಗಿದ್ದು, 15 ಮಕ್ಕಳು ಸೇರಿದಂತೆ ಕನಿಷ್ಠ 109 ಮಂದಿ ಮೃತಪಟ್ಟಿದ್ದಾರೆ. 116ಕ್ಕೂ ಹೆಚ್ಚು ಜನರು ನಾಪತ್ತೆಯಾಗಿದ್ದು, 80ಕ್ಕೂ ಹೆಚ್ಚು ಮಂದಿಯನ್ನು ರಕ್ಷಿಸಲಾಗಿದೆ ಎಂದು ವಿಶ್ವಸಂಸ್ಥೆಯ ಅಂತರರಾಷ್ಟ್ರೀಯ ವಲಸೆ ಸಂಸ್ಥೆ (ಐಒಎಂ) ತಿಳಿಸಿದೆ.

ದುರಂತದ ಬಳಿಕ ಸಮುದ್ರದಲ್ಲಿ ಶೋಧ ಕಾರ್ಯಾಚರಣೆ ನಡೆಸಿರುವ ರಕ್ಷಣಾ ತಂಡಗಳು ಇದುವರೆಗೆ 109 ಮೃತದೇಹಗಳನ್ನು ಪತ್ತೆಹಚ್ಚಿವೆ. ಮೃತರಲ್ಲಿ 52 ಪುರುಷರು, 42 ಮಹಿಳೆಯರು ಹಾಗೂ 15 ಮಕ್ಕಳು ಸೇರಿದ್ದಾರೆ. ನಾಪತ್ತೆಯಾದವರಿಗಾಗಿ ಶೋಧ ಮುಂದುವರಿದಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಆತಂಕ ವ್ಯಕ್ತವಾಗಿದೆ.

ಆರ್ಥಿಕ ಸಂಕಷ್ಟ ಹಾಗೂ ಉದ್ಯೋಗಾವಕಾಶಗಳ ಕೊರತೆಯಿಂದಾಗಿ ಉತ್ತಮ ಜೀವನದ ನಿರೀಕ್ಷೆಯಲ್ಲಿ ಅನೇಕ ವಲಸಿಗರು ಅಪಾಯಕಾರಿ ಸಮುದ್ರ ಮಾರ್ಗವನ್ನು ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಇಂತಹ ಪ್ರಯಾಣದ ಸಂದರ್ಭದಲ್ಲಿ ಸಂಭವಿಸುವ ದೋಣಿ ದುರಂತಗಳು ಮಹಿಳೆಯರು ಮತ್ತು ಮಕ್ಕಳ ಜೀವಕ್ಕೂ ಗಂಭೀರ ಅಪಾಯ ಉಂಟುಮಾಡುತ್ತಿವೆ ಎಂದು ಐಒಎಂ ವರದಿ ತಿಳಿಸಿದೆ.

ಜಿಬೌಟಿಯಲ್ಲಿರುವ ಅಂತರರಾಷ್ಟ್ರೀಯ ವಲಸೆ ಸಂಸ್ಥೆಯ ಮಿಷನ್ ಮುಖ್ಯಸ್ಥ ಅಲೆಕ್ಸಾಂಡ್ರೆ ಕೊಯ್ಲಾಕ್ ಅವರು, ದುರಂತ ಸಂಭವಿಸಿದ ಪ್ರದೇಶದಲ್ಲಿ ಸಂಸ್ಥೆಯ ಸಿಬ್ಬಂದಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ತುರ್ತು ಪರಿಹಾರ ಕಾರ್ಯಗಳಲ್ಲಿ ತೊಡಗಿದ್ದಾರೆ ಎಂದು ತಿಳಿಸಿದ್ದಾರೆ. ಬದುಕುಳಿದವರಿಗೆ ಅಗತ್ಯ ವೈದ್ಯಕೀಯ ನೆರವು ಹಾಗೂ ಇತರ ತುರ್ತು ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಜಿಬೌಟಿ ಅಧಿಕಾರಿಗಳು ಸಮುದ್ರದಲ್ಲಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ಮುಂದುವರಿಸಿದ್ದು, ನಾಪತ್ತೆಯಾದವರ ಪತ್ತೆಗೆ ಪ್ರಯತ್ನ ನಡೆಸುತ್ತಿದ್ದಾರೆ. ರಕ್ಷಿಸಲ್ಪಟ್ಟ ವಲಸಿಗರಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಪತ್ತೆಯಾದ ಮೃತದೇಹಗಳ ಅಂತ್ಯಕ್ರಿಯೆಗೆ ಅಗತ್ಯ ವ್ಯವಸ್ಥೆ ಮಾಡಲಾಗುತ್ತಿದೆ.

ಘಟನೆಯ ಕುರಿತು ಇಥಿಯೋಪಿಯಾ ಸರ್ಕಾರ ಅಥವಾ ಜಿಬೌಟಿ ಆಡಳಿತದಿಂದ ತಕ್ಷಣಕ್ಕೆ ಯಾವುದೇ ಅಧಿಕೃತ ಪ್ರತಿಕ್ರಿಯೆ ಲಭ್ಯವಾಗಿಲ್ಲ ಎಂದು ವರದಿಯಾಗಿದೆ.

ಜಿಬೌಟಿ ಮತ್ತು ಯೆಮೆನ್ ನಡುವಿನ ಸಮುದ್ರ ಮಾರ್ಗವು ವಲಸಿಗರಿಗೆ ಅತ್ಯಂತ ಅಪಾಯಕಾರಿಯಾದ ಮಾರ್ಗಗಳಲ್ಲಿ ಒಂದಾಗಿದ್ದು, ಉತ್ತಮ ಬದುಕಿನ ಕನಸಿನೊಂದಿಗೆ ಪ್ರಯಾಣ ಬೆಳೆಸುವ ಅನೇಕರು ಇಂತಹ ದುರಂತಗಳಿಗೆ ಬಲಿಯಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

## ದೆಹಲಿಯಲ್ಲಿ ಪ್ರತಿಭಟನಾಕಾರರ ಬಂಧನಕ್ಕೆ ವಿಶ್ವಸಂಸ್ಥೆ ಆಕ್ಷೇಪ: ಭಾರತದ ತೀವ್ರ ಪ್ರತಿಕ್ರಿಯೆ

ನವದೆಹಲಿ: ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕಾಕ್ರಾಚ್ ಜನತಾ ಪಾರ್ಟಿ (ಸಿಜೆಪಿ) ನೇತೃತ್ವದಲ್ಲಿ ನಡೆದ ಪ್ರತಿಭಟನೆ ಹಾಗೂ ಪ್ರತಿಭಟನಾಕಾರರನ್ನು ಸಾಮೂಹಿಕವಾಗಿ ವಶಕ್ಕೆ ಪಡೆದಿರುವ ಕ್ರಮದ ಕುರಿತು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಹೈಕಮಿಷನರ್ ಕಚೇರಿ (OHCHR) ವ್ಯಕ್ತಪಡಿಸಿರುವ ಕಳವಳಕ್ಕೆ ಭಾರತ ಸರ್ಕಾರ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ದೇಶದ ಆಂತರಿಕ ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ವಿಷಯಗಳಲ್ಲಿ ಹೊರಗಿನ ಸಂಸ್ಥೆಗಳ ಹಸ್ತಕ್ಷೇಪ ಸ್ವೀಕಾರಾರ್ಹವಲ್ಲ ಎಂದು ಭಾರತ ಪ್ರತಿಕ್ರಿಯಿಸಿದೆ.

ವಿಶ್ವಸಂಸ್ಥೆಯ ಮಾನವ ಹಕ್ಕುಗಳ ವಕ್ತಾರ ಥಾಮೀನ್ ಅಲ್-ಖೀತನ್ ಅವರು ದೆಹಲಿಯಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸರು ಕೈಗೊಂಡ ಮುಂಜಾಗ್ರತಾ ಬಂಧನಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದರು. ಪ್ರತಿಭಟನಾಕಾರರು, ಹೋರಾಟದ ಮುಖಂಡರು, ನಾಗರಿಕ ಸಮಾಜದ ಸಂಘಟನೆಗಳ ಪ್ರತಿನಿಧಿಗಳು, ವಕೀಲರು ಹಾಗೂ ಪತ್ರಕರ್ತರನ್ನು ವಶಕ್ಕೆ ಪಡೆದಿರುವ ಕ್ರಮವು ಶಾಂತಿಯುತ ಪ್ರತಿಭಟನೆಯ ಹಕ್ಕಿನ ಕುರಿತು ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಹೇಳಿದ್ದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾಗರಿಕರಿಗೆ ಶಾಂತಿಯುತವಾಗಿ ಸಭೆ ಸೇರುವ ಹಾಗೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕು ಇದೆ. ಪ್ರತಿಭಟನೆಗಳನ್ನು ನಿಯಂತ್ರಿಸುವ ಸಂದರ್ಭದಲ್ಲಿ ಪೊಲೀಸರು ಸಂಯಮದಿಂದ ವರ್ತಿಸಬೇಕು. ಅನಗತ್ಯ ಬಂಧನಗಳನ್ನು ತಪ್ಪಿಸುವುದರ ಜೊತೆಗೆ ವಶಕ್ಕೆ ಪಡೆದಿರುವವರನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಕಚೇರಿ ಒತ್ತಾಯಿಸಿತ್ತು.



Ministry of External Affairs
Government of India

STATEMENT

We have seen certain remarks by the Office of the High Commissioner for Human Rights about yesterday's events in New Delhi.

India is the world's largest democracy, where the right to peaceful assembly is guaranteed by our Constitution and safeguarded by robust institutions, an independent judiciary and a free media.

As in every democracy, Indian citizens exercise this right subject to the maintenance of public order and safety. Our law enforcement authorities act strictly in accordance with the law, and our courts remain available to all for the redressal of any grievances.

The OHCHR's concerns are therefore unwarranted and constitute an unacceptable interference in the internal affairs of India.

We also note that the OHCHR has an approach of extreme selectivity when it comes to public positions. Violent responses to protests in our neighbourhood have gone uncommented, as indeed have law enforcement actions in its own vicinity. Such double standards only erode the credibility of its standing and contribute to the loss of faith in multilateralism.

11 October 2026

ಈ ಹೇಳಿಕೆಗೆ ಪ್ರತಿಕ್ರಿಯಿಸಿರುವ ಭಾರತ, ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಸಂಸ್ಥೆಯು ಭಾರತದ ವಿಚಾರದಲ್ಲಿ ಪಕ್ಷಪಾತದ ನಿಲುವು ಅನುಸರಿಸುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದೆ. ವಿಶ್ವದ ವಿವಿಧ ರಾಷ್ಟ್ರಗಳಲ್ಲಿ ಪ್ರತಿಭಟನಾಕಾರರ ವಿರುದ್ಧ ಹಿಂಸಾತ್ಮಕ ದಮನ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ನಡೆದಾಗ ಸಮರ್ಪಕವಾಗಿ ಪ್ರತಿಕ್ರಿಯಿಸದ ಸಂಸ್ಥೆಯು ಭಾರತದ ಕಾನೂನುಬದ್ಧ ಕ್ರಮಗಳನ್ನು ಮಾತ್ರ ಪ್ರಶ್ನಿಸುತ್ತಿರುವುದು ಸರಿಯಲ್ಲ ಎಂಬ ನಿಲುವನ್ನು ವ್ಯಕ್ತಪಡಿಸಿದೆ.

ಮಾನವ ಹಕ್ಕುಗಳ ರಕ್ಷಣೆಯ ವಿಚಾರದಲ್ಲಿ ಎಲ್ಲ ರಾಷ್ಟ್ರಗಳಿಗೂ ಒಂದೇ ರೀತಿಯ ಮಾನದಂಡ ಅನ್ವಯಿಸಬೇಕು. ಕೆಲವು ದೇಶಗಳ ಘಟನೆಗಳ ಬಗ್ಗೆ ಮೌನ ವಹಿಸಿ, ಆಯ್ದ ರಾಷ್ಟ್ರಗಳ ವಿರುದ್ಧ ಮಾತ್ರ ಹೇಳಿಕೆ ನೀಡುವುದರಿಂದ ಅಂತರರಾಷ್ಟ್ರೀಯ ಸಂಸ್ಥೆಗಳ ವಿಶ್ವಾಸಾರ್ಹತೆಗೆ ಧಕ್ಕೆಯಾಗುತ್ತದೆ ಎಂಬುದು ಭಾರತದ ಆಕ್ಷೇಪವಾಗಿದೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆಯುತ್ತಿವೆ ಎಂದು ಆರೋಪಿಸಿ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ ಸಿಜೆಪಿ ನೇತೃತ್ವದಲ್ಲಿ ದೆಹಲಿ ಚಲೋ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಸಾವಿರಾರು ಮಂದಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಪ್ರತಿಭಟನಾ ಸಂಘಟನೆಗಳು ಆರೋಪಿಸಿದ್ದವು.

ಪ್ರತಿಭಟನೆಯ ಸಂದರ್ಭದಲ್ಲಿ ನಾಗರಿಕ ಸಮಾಜದ ಮುಖಂಡರು, ವಕೀಲರು ಹಾಗೂ ಪತ್ರಕರ್ತರನ್ನೂ ವಶಕ್ಕೆ ಪಡೆದಿರುವ ಬಗ್ಗೆ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಕಚೇರಿ ಕಳವಳ ವ್ಯಕ್ತಪಡಿಸಿತ್ತು. ಬಂಧಿತರ ಬಿಡುಗಡೆ ಹಾಗೂ ಶಾಂತಿಯುತ ಪ್ರತಿಭಟನೆಯ ಹಕ್ಕಿನ ರಕ್ಷಣೆಗೆ ಒತ್ತಾಯಿಸಿದ್ದ ಹಿನ್ನೆಲೆಯಲ್ಲಿ ಭಾರತ ಮತ್ತು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಸಂಸ್ಥೆಯ ನಡುವೆ ಭಿನ್ನಾಭಿಪ್ರಾಯ ಉಂಟಾಗಿದೆ.

ಪ್ರತಿಭಟನೆಗಳನ್ನು ನಿಯಂತ್ರಿಸುವಾಗ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸರ್ಕಾರದ ಜವಾಬ್ದಾರಿ ಹಾಗೂ ನಾಗರಿಕರ ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಶಾಂತಿಯುತ ಪ್ರತಿಭಟನೆಯ ಹಕ್ಕುಗಳ ನಡುವಿನ ಸಮತೋಲನದ ವಿಚಾರ ಮತ್ತೊಮ್ಮೆ ಚರ್ಚೆಗೆ ಬಂದಿದೆ.

# ಮೈಸೂರು ದಸರಾ ಉದ್ಘಾಟನೆಗೆ ದೇವದುರ್ಗದ ಅಜೇಂದ್ರ ಮಹಾಸ್ವಾಮಿಗಳಿಗೆ ಆಹ್ವಾನ



ದೇವದುರ್ಗ: ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ2026ರ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲು ದೇವದುರ್ಗದ ಶ್ರೀಮದ್ ಆನೇಗುಂದಿ ಮೂಲ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಅಜೇಂದ್ರ ಮಹಾಸ್ವಾಮಿಗಳಿಗೆ ಗೌರವಪೂರ್ವಕ ಆಹ್ವಾನ ನೀಡಲಾಗಿದೆ.

ಅಕ್ಟೋಬರ್ 11ರಂದು ಭಾನುವಾರ ಬೆಳಿಗ್ಗೆ 11:50ಕ್ಕೆ ಮೈಸೂರಿನ ಚಾಮುಂಡಿ ಬೆಟ್ಟದಲ್ಲಿರುವ ಶ್ರೀ ಚಾಮುಂಡೇಶ್ವರಿ ದೇವಿಯ ಸನ್ನಿಧಿಯಲ್ಲಿ ದಸರಾ ಮಹೋತ್ಸವದ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿದ್ದು, ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮಹಾಸ್ವಾಮಿಗಳಿಗೆ ಅಧಿಕೃತ ಆಹ್ವಾನ ಪತ್ರಿಕೆ ಕಳುಹಿಸಲಾಗಿದೆ.

ಕೊಪ್ಪಳದ ಸಂಸ್ಥಾನ ಶ್ರೀ ಗವಿಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ದಸರಾ ಮಹೋತ್ಸವವನ್ನು ಉದ್ಘಾಟಿಸಲಿದ್ದು, ಸಮಾರಂಭದಲ್ಲಿ ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ.

ಕರ್ನಾಟಕದ ಸಾಂಸ್ಕೃತಿಕ ವೈಭವ, ಧಾರ್ಮಿಕ ಪರಂಪರೆ ಹಾಗೂ ನಾಡಿನ ಹಿರಿಮೆಯನ್ನು ಪ್ರತಿಬಿಂಬಿಸುವ ಮೈಸೂರು ದಸರಾ ಮಹೋತ್ಸವಕ್ಕೆ ದೇವದುರ್ಗದ ಶ್ರೀ ಅಂಜನೇಂದ್ರ ಮಹಾಸ್ವಾಮಿಗಳನ್ನು ಆಹ್ವಾನಿಸಿರುವುದು ಸ್ಥಳೀಯ ಭಕ್ತರಲ್ಲಿ ಸಂತಸ ಮೂಡಿಸಿದೆ.

ನಾಡಿನ ಪ್ರತಿಷ್ಠಿತ ಧಾರ್ಮಿಕ ಹಾಗೂ ಸಾಂಸ್ಕೃತಿಕ ಸಮಾರಂಭದಲ್ಲಿ ದೇವದುರ್ಗದ ಮಠದ ಪೀಠಾಧಿಪತಿಗಳಿಗೆ ಗೌರವಯುತ ಆಹ್ವಾನ ದೊರೆತಿರುವುದು ಮಠದ ಭಕ್ತವೃಂದ ಹಾಗೂ ದೇವದುರ್ಗದ ಜನತೆಗೆ ಹೆಮ್ಮೆಯ ವಿಷಯವಾಗಿದೆ.

# ಮತದಾನದ ಹಕ್ಕು ರಕ್ಷಣೆಗೆ ಆಗ್ರಹಿಸಿ ಮಾನ್ವಿಯಲ್ಲಿ ಮೇಣದಬತ್ತಿ ಬೆಳಗಿಸಿ ಪ್ರತಿಭಟನೆ



ಮಾನ್ವಿ: ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ರಕ್ಷಣೆ ಮತ್ತು ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕನ್ನು ಕಾಪಾಡುವಂತೆ ಆಗ್ರಹಿಸಿ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಎದ್ದೇಳು ಕರ್ನಾಟಕ, ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ, ಎಸ್‌ಡಿಪಿಐ ಸೇರಿದಂತೆ ವಿವಿಧ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ಮೇಣದಬತ್ತಿ ಬೆಳಗಿಸಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಜಿಲ್ಲಾಧ್ಯಕ್ಷ ಶೇಖ್ ಫರೀದ್ ಉಮ್ರಿ, ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕನ ಮೇಲಿದೆ. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸಿಕೊಳ್ಳಲು ಎಲ್ಲರೂ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕಾದ ಅಗತ್ಯವಿದೆ ಎಂದು ಹೇಳಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆಯುತ್ತಿರುವ ಹೋರಾಟ ಕೇವಲ ದೆಹಲಿಗೆ ಸೀಮಿತವಾಗಬಾರದು. ದೇಶದ ಪ್ರತಿಯೊಂದು ಭಾಗದಲ್ಲಿಯೂ ಜನರು ತಮ್ಮ ಹಕ್ಕುಗಳ ರಕ್ಷಣೆಗಾಗಿ ಜಾಗೃತರಾಗಿ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಎದ್ದೇಳು ಕರ್ನಾಟಕ ಸಂಘಟನೆಯ ಅಧ್ಯಕ್ಷ ಶರಣಕುಮಾರ ಮುದಂಗುಡ್ಡಿ, ಲಕ್ಷ್ಮಣ ಜಾನೇಕಲ್, ಶೇಖ್ ಬಾಬಾ ಹುಸೇನ್, ಎಂ.ಎ.ಎಚ್. ಮುಖೀಮ್, ಸೋಲಿಡಾರಿಟಿ ಯೂತ್ ಮೂವ್‌ಮೆಂಟ್ ತಾಲೂಕು ಅಧ್ಯಕ್ಷ ನಸೀರ್ ಅಲಿ, ರವೀಂದ್ರ, ಹನುಮಂತ ಕೋಟೆ, ಸತ್ತಾರ್ ಬಂಗ್ಲೇವಾಲೆ, ಎಸ್‌ಡಿಪಿಐ ಮುಖಂಡ ಇಬ್ರಾಹಿಂ, ಶುಕೂರ್ ಸಾಬ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಶ್ರೀ ಬನ್ನಿ ಮಹಾಂಕಾಳಿ ದೇವಿಯ ನೂತನ ಮೂರ್ತಿ ಪ್ರತಿಷ್ಠಾಪನೆ




ಸಿರವಾರ, ಅ.10: ನವರಾತ್ರಿ ಮಹೋತ್ಸವದ ಅಂಗವಾಗಿ ಪಟ್ಟಣದ ಮುಖ್ಯರಸ್ತೆಯಲ್ಲಿರುವ ಶ್ರೀ ಬನ್ನಿ ಮಹಾಂಕಾಳಿ ದೇವಸ್ಥಾನದಲ್ಲಿ ನೂತನ ದೇವಿಯ ಮೂರ್ತಿ ಪ್ರತಿಷ್ಠಾಪನಾ ಸಮಾರಂಭವು ಭಾನುವಾರ ಧಾರ್ಮಿಕ ವಿಧಿವಿಧಾನಗಳೊಂದಿಗೆ ಭಕ್ತಿಭಾವದಿಂದ ನೆರವೇರಿತು.

ಶ್ರೀ ನೀಲಗಲ್ ಬೃಹನ್ಮಠದ ಪೂಜ್ಯ ಡಾ. ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಸಮಾರಂಭದಲ್ಲಿ ವೇದಮಂತ್ರಗಳ ಪಠಣ, ವಿಶೇಷ ಪೂಜೆ ಹಾಗೂ ಹೋಮ-ಹವನಗಳ ಮೂಲಕ ನೂತನ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು. ನವರಾತ್ರಿ ಉತ್ಸವದ ಸಂದರ್ಭದಲ್ಲಿ ನಡೆದ ಈ ಧಾರ್ಮಿಕ ಕಾರ್ಯಕ್ರಮಕ್ಕೆ ಪಟ್ಟಣದ ವಿವಿಧ ಭಾಗಗಳಿಂದ ಭಕ್ತರು ಆಗಮಿಸಿದ್ದರು.

ಮೂರ್ತಿ ಪ್ರತಿಷ್ಠಾಪನೆಗೂ ಮುನ್ನ ದೇವಿಯ ನೂತನ ವಿಗ್ರಹವನ್ನು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮಂಗಳವಾದ್ಯಗಳೊಂದಿಗೆ ಮೆರವಣಿಗೆ ಮಾಡಲಾಯಿತು. ಸಾಂಪ್ರದಾಯಿಕ ಉಡುಗೆಯಲ್ಲಿ ಪಾಲ್ಗೊಂಡಿದ್ದ ಮುತ್ತೈದೆಯರು ಪೂರ್ಣಕುಂಭ ಕಳಸಗಳನ್ನು ಹೊತ್ತು ಮೆರವಣಿಗೆಗೆ ವಿಶೇಷ ಮೆರುಗು ನೀಡಿದರು. ಭಕ್ತರು ದೇವಿಯ ನಾಮಸ್ಮರಣೆ ಮಾಡುತ್ತ ಮೆರವಣಿಗೆಯಲ್ಲಿ ಭಾಗವಹಿಸಿದರು.

ದೇವಸ್ಥಾನಕ್ಕೆ ಮೂರ್ತಿಯನ್ನು ಕರೆತಂದ ಬಳಿಕ ಶಾಸ್ತ್ರೋಕ್ತ ಸಂಪ್ರದಾಯದಂತೆ ಜಲವಾಸ, ಧಾನ್ಯವಾಸ ಸೇರಿದಂತೆ ವಿವಿಧ ಧಾರ್ಮಿಕ ವಿಧಿಗಳನ್ನು ನೆರವೇರಿಸಲಾಯಿತು. ನಂತರ ವಿಶೇಷ ಹೋಮ, ಪೂಜೆ ಹಾಗೂ ಮಂಗಳಾರತಿ ಸಲ್ಲಿಸಿ ಶ್ರೀ ಬನ್ನಿ ಮಹಾಂಕಾಳಿ ದೇವಿಯ ನೂತನ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು.

ನವರಾತ್ರಿ ಪ್ರಯುಕ್ತ ನಡೆದ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮದಿಂದ ದೇವಸ್ಥಾನದ ಆವರಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ದೇವಿಯ ದರ್ಶನಕ್ಕಾಗಿ ಮಹಿಳೆಯರು, ಯುವಕರು, ಮಕ್ಕಳು ಹಾಗೂ ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪಟ್ಟಣದ ಗಣ್ಯರು, ದೇವಸ್ಥಾನದ ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು, ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಶ್ರೀ ಬನ್ನಿ ಮಹಾಂಕಾಳಿ ದೇವಿಯ ಆಶೀರ್ವಾದ ಪಡೆದರು.

# ಶರನ್ನವರಾತ್ರಿ ಅಂಗವಾಗಿ ಬೃಹಸ್ಪತಿವಾರಪೇಟೆಯ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ



ರಾಯಚೂರು: ನಗರದ ಹೃದಯ ಭಾಗದಲ್ಲಿರುವ ಬೃಹಸ್ಪತಿವಾರಪೇಟೆಯ ಶ್ರೀ ವೀರಭದ್ರೇಶ್ವರ ಸಹಿತ ಭದ್ರಕಾಳಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ವಿಶೇಷ ಪೂಜಾ ಕಾರ್ಯಕ್ರಮಗಳಿಗೆ ಭಕ್ತಿಭಾವದಿಂದ ಚಾಲನೆ ನೀಡಲಾಯಿತು. ದೇವಸ್ಥಾನದ ಗರ್ಭಗುಡಿಯಲ್ಲಿ ಅರ್ಚಕ ಶಶಿಕುಮಾರ ಸ್ವಾಮಿಯವರು ಜಗನ್ಮಾತೆ ಶಾಂಭವಿ ದೇವಿಯ ಭಾವಚಿತ್ರವನ್ನು ಪ್ರತಿಷ್ಠಾಪಿಸಿ ಪೂಜೆ ನೆರವೇರಿಸಿದರು. ನವರಾತ್ರಿಯ ಒಂಬತ್ತು ದಿನಗಳ ಕಾಲ ದೇವಿಗೆ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಶರನ್ನವರಾತ್ರಿಯ ಮೊದಲ ದಿನವೇ ಬೃಹಸ್ಪತಿವಾರಪೇಟೆ, ಮಕ್ತಲಪೇಟೆ ಸೇರಿದಂತೆ ನಗರದ ವಿವಿಧ ಬಡಾವಣೆಗಳಿಂದ ನೂರಾರು ಮಹಿಳೆಯರು ದೇವಸ್ಥಾನಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದರು. ದೇವಸ್ಥಾನದ ಆವರಣದಲ್ಲಿ ಹೊಸದಾಗಿ ನಿರ್ಮಿಸಿ, ಮಾಂಗಲ್ಯಧಾರಣೆ ಮೂಲಕ ಶುದ್ಧೀಕರಿಸಲಾದ ಬನ್ನಿ ಮಹಾಂಕಾಳಿಯ ಮಂಟಪಕ್ಕೆ ಮಹಿಳೆಯರು ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಿ ಮಹಾಮಂಗಳಾರತಿ ಬೆಳಗಿದರು.

ಈ ಸಂದರ್ಭದಲ್ಲಿ ತಮ್ಮ ಕುಟುಂಬಗಳಿಗೆ ಸುಖ, ಶಾಂತಿ, ಆರೋಗ್ಯ, ನೆಮ್ಮದಿ ಹಾಗೂ ಅಷ್ಟೈಶ್ವರ್ಯ ಕರುಣಿಸುವಂತೆ ದೇವಿಯಲ್ಲಿ ಪ್ರಾರ್ಥಿಸಿದರು. ಮುಂಗಾರು ಹಂಗಾಮಿನಲ್ಲಿ ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಹಿಂಗಾರು ಹಂಗಾಮಿನಲ್ಲಾದರೂ ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗುವಂತೆ ವರುಣನ ಕೃಪೆ ಕರುಣಿಸಬೇಕೆಂದು ದೇವಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ದೇವಸ್ಥಾನದ ಆವರಣದಲ್ಲಿರುವ ಬನ್ನಿ ಮಹಾಂಕಾಳಿಯ ಮಂಟಪವು ಮೇಲ್ಭಾಗದಿಂದ ವೀಕ್ಷಿಸಿದಾಗ ಓಂಕಾರ ಅಕ್ಷರದ ಆಕಾರದಲ್ಲಿ ಕಂಗೊಳಿಸುತ್ತಿರುವುದು ವಿಶೇಷವಾಗಿದೆ. ಈ ಮಂಟಪಕ್ಕೆ ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಿ ಹರಕೆ ಮಾಡಿಕೊಂಡರೆ ಇಷ್ಟಾರ್ಥಗಳು ಈಡೇರುತ್ತವೆ ಎಂಬ ನಂಬಿಕೆ ಭಕ್ತರಲ್ಲಿದೆ. ಪುರಾಣ ಹಾಗೂ ಧಾರ್ಮಿಕ ಪರಂಪರೆಯಲ್ಲಿ ಬನ್ನಿ ಮರಕ್ಕೆ ವಿಶೇಷ ಮಹತ್ವವಿದ್ದು, ನವರಾತ್ರಿಯ ಸಂದರ್ಭದಲ್ಲಿ ಬನ್ನಿ ಪೂಜೆಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗುತ್ತದೆ.

ನವರಾತ್ರಿಯ ಮೊದಲ ದಿನದ ಅಂಗವಾಗಿ ಮಹಿಳೆಯರು ಮಧ್ಯರಾತ್ರಿಯಿಂದಲೇ ತಮ್ಮ ಮನೆಗಳನ್ನು ಸ್ವಚ್ಛಗೊಳಿಸಿ, ಮಡಿಯಿಂದ ಪೂಜೆ ಸಲ್ಲಿಸಿ ದೇವಸ್ಥಾನಕ್ಕೆ ಆಗಮಿಸಿದ್ದರು. ಒಂಬತ್ತು ದಿನಗಳ ಕಾಲ ಪಾದರಕ್ಷೆ ಧರಿಸದೆ, ಮಡಿ ಉಡುಪುಗಳನ್ನು ಧರಿಸಿ ದೇವಿಯ ಆರಾಧನೆಯಲ್ಲಿ ತೊಡಗಿಕೊಳ್ಳುವುದು ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ಧಾರ್ಮಿಕ ಸಂಪ್ರದಾಯವಾಗಿದೆ. ಈ ಆಚರಣೆಯ ಮೂಲಕ ಜಗನ್ಮಾತೆ ಶಾಂಭವಿಯ ಕೃಪೆಗೆ ಪಾತ್ರರಾಗುವ ನಂಬಿಕೆಯನ್ನು ಮಹಿಳೆಯರು ವ್ಯಕ್ತಪಡಿಸಿದರು.

ವಿಶೇಷ ಪೂಜೆಯ ಬಳಿಕ ಮಹಿಳೆಯರು ಶ್ರೀ ವೀರಭದ್ರೇಶ್ವರ ಸ್ವಾಮಿಯ ದರ್ಶನ ಪಡೆದು ಆಶೀರ್ವಾದ ಪಡೆದರು. ದೇವಸ್ಥಾನದ ಅರ್ಚಕ ವೀರೇಶ ಸ್ವಾಮಿಯವರು ಆಗಮಿಸಿದ್ದ ಭಕ್ತರಿಗೆ ತೀರ್ಥಪ್ರಸಾದ ವಿತರಿಸಿದರು. ನವರಾತ್ರಿ ಮಹೋತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನದ ಆವರಣದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು.

# ಬಸವರಾಜ ಪಡಕೋಟೆ ಜನ್ಮದಿನಾಚರಣೆ: ಆಸ್ಪತ್ರೆ ರೋಗಿಗಳಿಗೆ ಹಾಲು, ಹಣ್ಣು ವಿತರಣೆ



ಲಿಂಗಸುಗೂರು: ನಮ್ಮ ಕರ್ನಾಟಕ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಬಸವರಾಜ ಪಡಕೋಟೆ ಅವರ 57ನೇ ಜನ್ಮದಿನದ ಅಂಗವಾಗಿ ಸಂಘಟನೆಯ ಲಿಂಗಸುಗೂರು ತಾಲೂಕು ಘಟಕದ ಪದಾಧಿಕಾರಿಗಳು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಾಲು ಹಾಗೂ ಹಣ್ಣು ವಿತರಿಸುವ ಮೂಲಕ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಮ್ಮ ಕರ್ನಾಟಕ ಸೇನೆಯ ತಾಲೂಕು ಅಧ್ಯಕ್ಷ ಶಿವರಾಜ ನಾಯ್ಕ, ಬಸವರಾಜ ಪಡಕೋಟೆ ಅವರು ಸಮಾಜಸೇವೆ ಹಾಗೂ ಜನಪರ ಹೋರಾಟಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಾ ಬಂದಿದ್ದಾರೆ. ಅವರ ಜನ್ಮದಿನವನ್ನು ಆಡಂಬರದಿಂದ ಆಚರಿಸುವ ಬದಲು ಆಸ್ಪತ್ರೆಯ ರೋಗಿಗಳಿಗೆ ಹಾಲು, ಹಣ್ಣು ವಿತರಿಸುವ ಮೂಲಕ ಸೇವಾ ಕಾರ್ಯ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಬಸವರಾಜ ಪಡಕೋಟೆ ಅವರ ಮಾರ್ಗದರ್ಶನದಲ್ಲಿ ನಮ್ಮ ಕರ್ನಾಟಕ ಸೇನೆಯು ರಾಜ್ಯಾದ್ಯಂತ ಸಂಘಟನೆಯನ್ನು ಬಲಪಡಿಸುವುದರ ಜೊತೆಗೆ ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಂಡಿದೆ. ಮುಂದಿನ ದಿನಗಳಲ್ಲಿಯೂ ಬಡವರು, ಶೋಷಿತರು ಹಾಗೂ ಅಗತ್ಯವಿರುವ ಜನರಿಗೆ ನೆರವಾಗುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಪ್ರಧಾನ ಕಾರ್ಯದರ್ಶಿ ನಿರುಪಾದಿ ಹಿರೇಮಠ, ಉಪಾಧ್ಯಕ್ಷ ಚಂದ್ರು ನಾಯಕ, ಸಂಚಾಲಕ ಬಸವರಾಜ ನಾಯಕ, ನಗರ ಘಟಕದ ಅಧ್ಯಕ್ಷ ಚಂದ್ರಕಾಂತ ಭೋವಿ, ತಾಲೂಕು ಖಜಾಂಚಿ ರವಿಕುಮಾರ, ಕಾರ್ಮಿಕ ಘಟಕದ ಅಧ್ಯಕ್ಷ ದೇವೇಂದ್ರ ನಾಯಕ, ನಗರ ಯುವ ಘಟಕದ ಅಧ್ಯಕ್ಷ ಶಿವರಾಜ ಅಲಬನೂರು, ತಾಲೂಕು ಯುವ ಘಟಕದ ಅಧ್ಯಕ್ಷ ಕಿರಣ ನಾಯಕ, ಸಂಘಟನಾ ಕಾರ್ಯದರ್ಶಿ ರಮೇಶ ಭೋವಿ, ಸಹ ಕಾರ್ಯದರ್ಶಿ ಮಹಾಂತಯ್ಯ ಸ್ವಾಮಿ, ಲಕ್ಷ್ಮಣ ಭೋವಿ, ವೆಂಕಟೇಶ ಗುತ್ತೇದಾರ, ರಾಜು ನಾಯಕ, ಕೃಷ್ಣ ಭೋವಿ, ಸೊಹನ್ ಕುಮಾರ ಯಾದವ್, ಗೌತಮ್ ಕುಮಾರ, ಸಂಗಪ್ಪ ತೋಟದ, ಮಹೇಂದ್ರ ಕುಮಾರ, ದೇವಪ್ಪ ಸರ್ಜಾಪುರ, ಮಾರ್ಕಂಡಪ್ಪ ನಾಯಕ, ಸಾರ್ಗ, ಶಂಭುಗೌಡ ಸರ್ಜಾಪುರ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೀನುಗಾರರ ಸಹಕಾರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ: ಯಲ್ಲಪ್ಪ ಚಿಮ್ಮಲಗಿ ಅಧ್ಯಕ್ಷ



ಲಿಂಗಸುಗೂರು: ತಾಲೂಕು ಮೀನುಗಾರರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಯಲ್ಲಪ್ಪ ಚಿಮ್ಮಲಗಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಜಗದೀಶ ಇಂಡಿ ಅವರು ಆಯ್ಕೆಯಾಗಿದ್ದು, ಈ ಹಿನ್ನೆಲೆಯಲ್ಲಿ ವಿವಿಧ ಮುಖಂಡರು ಇಬ್ಬರಿಗೂ ಸನ್ಮಾನಿಸಿ ಶುಭ ಹಾರೈಸಿದರು.

ನೂತನ ಪದಾಧಿಕಾರಿಗಳ ಆಯ್ಕೆಗೆ ಸಂತಸ ವ್ಯಕ್ತಪಡಿಸಿದ ಎಂಎಲ್‌ಸಿ ಆಪ್ತ ಕಾರ್ಯದರ್ಶಿ ಚೆನ್ನಾರೆಡ್ಡಿ ಬಿರಾದಾರ, ಹಿಂದುಳಿದ ವರ್ಗಗಳ ತಾಲೂಕು ಅಧ್ಯಕ್ಷ ಪ್ರಕಾಶ ಕುರಿ ಸೇರಿದಂತೆ ಹಲವು ಮುಖಂಡರು, ಸಂಘದ ಅಭಿವೃದ್ಧಿಗೆ ನೂತನ ನಾಯಕತ್ವ ಹೊಸ ಚೈತನ್ಯ ನೀಡಲಿ ಎಂದು ಆಶಿಸಿದರು.

ಈ ವೇಳೆ ಮಾತನಾಡಿದ ಚೆನ್ನಾರೆಡ್ಡಿ ಬಿರಾದಾರ, ಮೀನುಗಾರಿಕೆ ವೃತ್ತಿಯನ್ನು ಅವಲಂಬಿಸಿರುವ ಕುಟುಂಬಗಳ ಆರ್ಥಿಕ ಹಾಗೂ ಸಾಮಾಜಿಕ ಪ್ರಗತಿಗೆ ಸಹಕಾರ ಸಂಘಗಳು ಪ್ರಮುಖ ಪಾತ್ರ ವಹಿಸುತ್ತವೆ. ಸಮುದಾಯದ ಎಲ್ಲರೂ ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನಿಂದ ಸಂಘಟನೆಯನ್ನು ಮುನ್ನಡೆಸಿದಾಗ ಮಾತ್ರ ನಿರೀಕ್ಷಿತ ಅಭಿವೃದ್ಧಿ ಸಾಧಿಸಲು ಸಾಧ್ಯವಾಗುತ್ತದೆ ಎಂದರು.

ಮೀನುಗಾರರ ಕಲ್ಯಾಣಕ್ಕಾಗಿ ಸರ್ಕಾರ ರೂಪಿಸಿರುವ ವಿವಿಧ ಸೌಲಭ್ಯಗಳು ಹಾಗೂ ಸಹಾಯಧನ ಯೋಜನೆಗಳ ಕುರಿತು ಸಮುದಾಯದಲ್ಲಿ ಅರಿವು ಮೂಡಿಸಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಪ್ರಯೋಜನ ದೊರಕಿಸಿಕೊಡುವ ನಿಟ್ಟಿನಲ್ಲಿ ನೂತನ ಪದಾಧಿಕಾರಿಗಳು ವಿಶೇಷ ಗಮನಹರಿಸಬೇಕು. ಸಂಘದ ಚಟುವಟಿಕೆಗಳನ್ನು ಮತ್ತಷ್ಟು ಕ್ರಿಯಾಶೀಲಗೊಳಿಸುವ ಮೂಲಕ ಮೀನುಗಾರರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಂಗನಗೌಡ ರೋಡಲಬಂಡಾ, ಜಟ್ಟೆಪ್ಪ ಕೋಟೆಗುಡ್ಡ, ಬರಮಣ್ಣ ಕಸಕಶಿ, ರವಿ ಹುಣಕುಂಠಿ, ಧೂಳಪ್ಪ ಕೋಡಿಹಾಲ, ಶಿವಾಜಿ ಕಟ್ಟಿಮನಿ, ಗದ್ದೆಪ್ಪ ಛಲವಾದಿ ಹಾಗೂ ಕುಮಾರ ಕಟ್ಟಿಮನಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು.

# ಹಿಂಗಾರು ಬಿತ್ತನೆಗೆ ಬೀಜ, ಗೊಬ್ಬರ ಕೊರತೆ: ಎರಡು ದಿನಗಳಲ್ಲಿ ಪೂರೈಸಲು ಅಂದಪ್ಪ ಕೋಳೂರು ಆಗ್ರಹ



ಕೊಪ್ಪಳ: ಜಿಲ್ಲೆಯಲ್ಲಿ ಅಲ್ಪ ಪ್ರಮಾಣದ ಹಸ್ತ ಮಳೆಯಾಗಿದ್ದು, ಭೂಮಿಯಲ್ಲಿ ತೇವಾಂಶದ ಕೊರತೆಯಿದ್ದರೂ ರೈತರು ಹಿಂಗಾರು ಬಿತ್ತನೆಗೆ ಮುಂದಾಗಿದ್ದಾರೆ. ಆದರೆ ಸ್ಥಳೀಯ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಲಭ್ಯವಿಲ್ಲದ ಕಾರಣ ರೈತರು ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ಜಿಲ್ಲಾಡಳಿತ ಎರಡು ದಿನಗಳೊಳಗೆ ಅಗತ್ಯ ಬೀಜ ಮತ್ತು ಗೊಬ್ಬರ ಪೂರೈಸಬೇಕು ಎಂದು ರೈತರ ಹಕ್ಕು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ರುದ್ರಪ್ಪ ಕೋಳೂರು ಆಗ್ರಹಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷ ಅತಿವೃಷ್ಟಿಯಿಂದ ರೈತರು ಬೆಳೆ ನಷ್ಟ ಅನುಭವಿಸಿದ್ದರು. ಈ ವರ್ಷ ಮುಂಗಾರು ಮಳೆಯ ಕೊರತೆಯಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗಿ ಹಾಳಾಗಿವೆ. ಸತತ ಸಂಕಷ್ಟಕ್ಕೆ ಸಿಲುಕಿರುವ ರೈತರು ಸಾಲ ಮಾಡಿ ಹಿಂಗಾರು ಬಿತ್ತನೆ ಆರಂಭಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ಅಗತ್ಯ ಕೃಷಿ ಪರಿಕರಗಳನ್ನು ಒದಗಿಸದಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ಕುಸುಬೆ, ಅಗಸೆ ಸೇರಿದಂತೆ ಹಿಂಗಾರು ಹಂಗಾಮಿಗೆ ಅಗತ್ಯವಿರುವ ಬಿತ್ತನೆ ಬೀಜಗಳು, ಬೀಜೋಪಚಾರ ಔಷಧಿಗಳು ಹಾಗೂ ರಸಗೊಬ್ಬರಗಳನ್ನು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಮಾಡಬೇಕು. ರೈತರಿಗೆ ಸಹಾಯಧನದ ದರದಲ್ಲಿ ವಿತರಿಸುವುದರ ಜೊತೆಗೆ, ಈ ಬಾರಿ ಹೆಚ್ಚಿನ ಪ್ರದೇಶದಲ್ಲಿ ಹಿಂಗಾರು ಬಿತ್ತನೆ ನಡೆಯುತ್ತಿರುವುದರಿಂದ ಅಗತ್ಯಕ್ಕೆ ಅನುಗುಣವಾಗಿ ಹೆಚ್ಚಿನ ಪ್ರಮಾಣದ ಬೀಜ ಒದಗಿಸಬೇಕು ಎಂದು ಒತ್ತಾಯಿಸಿದರು.

ಮುಂಗಾರು ಮಳೆ ಕೈಕೊಟ್ಟಿರುವುದರಿಂದ ರೈತರು ಹಿಂಗಾರು ಬೆಳೆಯನ್ನೇ ನಂಬಿಕೊಂಡಿದ್ದಾರೆ. ಭೂಮಿಯಲ್ಲಿ ಸಾಕಷ್ಟು ತೇವಾಂಶ ಇಲ್ಲದಿದ್ದರೂ ಮುಂದಿನ ದಿನಗಳಲ್ಲಿ ಮಳೆಯಾಗಬಹುದು ಎಂಬ ನಿರೀಕ್ಷೆಯಲ್ಲಿ ಬಿತ್ತನೆ ನಡೆಸುತ್ತಿದ್ದಾರೆ. ಹೀಗಾಗಿ ರೈತರಿಗೆ ಬೀಜ ಹಾಗೂ ಗೊಬ್ಬರದ ಕೊರತೆಯಾಗದಂತೆ ಕೃಷಿ ಇಲಾಖೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಮುಂದಿನ ಒಂದು ವಾರದೊಳಗೆ ಸಮರ್ಪಕ ಮಳೆಯಾಗದಿದ್ದರೆ ಜಿಲ್ಲೆಯ ತಾಲೂಕುಗಳನ್ನು ಹಿಂಗಾರು ಬರಪೀಡಿತ ಪ್ರದೇಶಗಳೆಂದು ಘೋಷಿಸಿ ರೈತರಿಗೆ ಪರಿಹಾರ ನೀಡಬೇಕು. ಅಲ್ಲದೆ, ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಎರಡು ಲಕ್ಷ ರೂಪಾಯಿವರೆಗಿನ ಕೃಷಿ ಸಾಲವನ್ನು ಬಡ್ಡಿ ಸಮೇತ ಮನ್ನಾ ಮಾಡಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸದಿದ್ದರೆ ಸಂಘಟನೆಯ ವತಿಯಿಂದ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಅಂದಪ್ಪ ಕೋಳೂರು ಎಚ್ಚರಿಸಿದರು.

# ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯರಾಗಿ ನರಸಪ್ಪ ಯಕ್ಲಾಸಪೂರ ನೇಮಕ



ರಾಯಚೂರು: ಭಾರತೀಯ ಜನತಾ ಪಾರ್ಟಿಯ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯ ಕಾರ್ಯಕಾರಿಣಿ ಸದಸ್ಯರಾಗಿ ನರಸಪ್ಪ ಯಕ್ಲಾಸಪೂರ ಅವರನ್ನು ನೇಮಕ ಮಾಡಲಾಗಿದೆ.

ಹಿಂದುಳಿದ ವರ್ಗಗಳ ಮೋರ್ಚಾದ ಅಧ್ಯಕ್ಷ ಆರ್. ರಘು (ಕೌಟಿಲ್ಯ) ಅವರು ನೇಮಕಾತಿ ಆದೇಶ ಹೊರಡಿಸಿದ್ದು, ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವ ಜವಾಬ್ದಾರಿಯನ್ನು ನರಸಪ್ಪ ಯಕ್ಲಾಸಪೂರ ಅವರಿಗೆ ವಹಿಸಿದ್ದಾರೆ.

ನೂತನ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವುದರ ಜೊತೆಗೆ ಲೋಕಸಭಾ ಚುನಾವಣೆ ಸೇರಿದಂತೆ ಮುಂಬರುವ ವಿವಿಧ ಚುನಾವಣೆಗಳಲ್ಲಿ ಪಕ್ಷದ ಗೆಲುವಿಗೆ ಸಮರ್ಪಣಾ ಮನೋಭಾವದಿಂದ ಶ್ರಮಿಸುವಂತೆ ನೇಮಕಾತಿ ಆದೇಶದಲ್ಲಿ ಆಶಯ ವ್ಯಕ್ತಪಡಿಸಿದ್ದಾರೆ.

# ಎನ್‌ಎಂಎಂಎಸ್ ಪರೀಕ್ಷಾ ತರಬೇತಿಗೆ ಆಯ್ಕೆಯಾದ 33 ವಿದ್ಯಾರ್ಥಿಗಳಿಗೆ ಟ್ಯಾಬ್ ವಿತರಣೆ



ದೇವದುರ್ಗ, ಅ.11: ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಆದಾಯ ಮತ್ತು ಅರ್ಹತಾ ವಿದ್ಯಾರ್ಥಿವೇತನ (ಎನ್‌ಎಂಎಂಎಸ್) ಪರೀಕ್ಷೆಗೆ ಸಿದ್ಧತೆ ನಡೆಸಲು ನೆರವಾಗುವ ಉದ್ದೇಶದಿಂದ ಬೆಂಗಳೂರಿನ ಡ್ರೀಮ್ ಸ್ಕೂಲ್ ಫೌಂಡೇಶನ್ ವತಿಯಿಂದ ಆಯ್ಕೆಯಾದ 33 ವಿದ್ಯಾರ್ಥಿಗಳಿಗೆ ಭಾನುವಾರ ಪಟ್ಟಣದ ಎಸ್‌ಕೆಎಂ ಕಾಲೇಜಿನಲ್ಲಿ ಟ್ಯಾಬ್‌ಗಳನ್ನು ವಿತರಿಸಲಾಯಿತು.

ಪ್ರಸಕ್ತ ಸಾಲಿನಿಂದ ದೇವದುರ್ಗ ಹಾಗೂ ಅರಕೇರಾ ತಾಲೂಕುಗಳ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳ 8ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಡಿಜಿಟಲ್ ಕಲಿಕಾ ಸಾಮಗ್ರಿಗಳ ಮೂಲಕ ಪರೀಕ್ಷೆಗೆ ಪರಿಣಾಮಕಾರಿಯಾಗಿ ಸಿದ್ಧತೆ ನಡೆಸಿ, ವಿದ್ಯಾರ್ಥಿವೇತನ ಪಡೆಯಲು ಅನುಕೂಲ ಕಲ್ಪಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಕಾರ್ಯಕ್ರಮದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಪಾಲಕರೊಂದಿಗೆ ಭಾಗವಹಿಸಿದ್ದರು. ಇಸಿಒ ಶರಣಪ್ಪ, ದೇವದುರ್ಗ ಗೂಗಲ್ ಕ್ಲಸ್ಟರ್‌ನ ಅಂಬಣ್ಣ, ಎಸ್‌ಕೆಎಂ ಶಾಲೆಯ ಮುಖ್ಯಗುರು ಬಸವರಾಜ ಯಟಗಲ್, ಸಗಾಯ್ ರಾಜ್, ಉಮೇಶ್ ಎಸ್., ಜಗದೀಶ್ ಎನ್. ಹಾಗೂ ಅಮ್ಜದ್ ಪಾಷ ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K